ವಿಜಯಪುರ | ಸಂಪುಟ 02 | ಸಂಚಿಕೆ 25 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ಗುರುವಾರ, ಮಾರ್ಚ್ 14, 2024



"ದೇಶದ ಎರಡನೇ ದೊಡ್ಡ ಪವನ ವಿದ್ಯುತ್ ಘಟಕವನ್ನು ವಿಜಯಪುರಕ್ಕೆ ತರಲು ಶ್ರಮಿಸುವುದರ ಮೂಲಕ ಜಿಲ್ಲೆಯಲ್ಲಿ ಯುವಕ-ರಿಗೆ ಉದ್ಯೋಗಾವಕಾಶ ಕಲ್ಪಿಸಿ ಕೈಗಾರಿಕಾ ಕ್ರಾಂತಿಗೆ ನಾಂದಿ ಹಾಡಿರುವ ಸಚಿವ ಡಾ. ಎಂ.ಬಿ.ಪಾಟೀಲ್ ರ ಕಾರ್ಯ ಅಭಿನಂದನಾರ್ಹ."

– ಸಂಗಮೇಶ್ ಬಬಲೇಶ್ವರ

ಮುಖ್ಯ ವಕ್ತಾರರು, ಕೆಪಿಸಿಸಿ ಪ್ರಚಾರ ಸಮಿತಿ

**ವಿಜಯಪುರದಲ್ಲಿ ಕೃಷಿ ಮತ್ತು ರೈತರ ಕಲ್ಯಾಣ ಇಲಾಖೆಯ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ರೈತರಿಗೆ ಕರೆ**

# ಕೇಂದ್ರದ ಯೋಜನೆಗಳ ಸದುಪಯೋಗಕ್ಕೆ ಶೋಭಾ ಕರೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ರೈತರು ಬೆಳೆದ ಬೆಳೆಗಳನ್ನು ಸಂಸ್ಕರಿಸಿ ಮೌಲ್ಯವರ್ಧನೆಗೊಳಿಸಿ ವಿವಿಧ ಆಹಾರ ಉತ್ಪನ್ನಗಳನ್ನು ತಯಾರಿಸಿ ವ್ಯಾಪಾರಕ್ಕೆ ಉತ್ತೇಜನ ನೀಡಿದರೆ ಆದಾಯ ದ್ವಿಗುಣವಾಗುವಾದರೊಂದಿಗೆ ರೈತರ ಬದುಕು ಹಸನಾಗುತ್ತದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಅನೇಕ ಯೋಜನೆಗಳನ್ನು ರೈತರಿಗಾಗಿ ಮೀಸಲಿಟ್ಟಿದೆ ಇದರ ಸದುಪಯೋಗ ರೈತರು ಪಡೆದುಕೊಳ್ಳಬೇಕು ಎಂದು ಕೃಷಿ ಮತ್ತು ರೈತರ ಕಲ್ಯಾಣ ಇಲಾಖೆಯ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು.

ಬುಧವಾರ ವಿಜಯಪುರ ಹೊರವಲಯ ಹಿಟ್ಟಿನಹಳ್ಳಿಯಲ್ಲಿರುವ ಕೃಷಿ ಮಹಾವಿದ್ಯಾಲಯ ಆವರಣದಲ್ಲಿ 85 ಲಕ್ಷ ರೂಪಾಯಿ ಅನುದಾನದ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ರೈತರ ವಸತಿ ನಿಲಯ ಕಟ್ಟಡದ ಉದ್ಘಾಟನೆಯನ್ನು ನೇರವೇರಿಸಿ ಅವರು ಮಾತನಾಡಿದರು.

ಕೃಷಿ ವಿಜ್ಞಾನ ಕೇಂದ್ರಗಳು ರೈತರಿಗೆ ದೇವಸ್ಥಾನವಿದ್ದಂತೆ. ಇಲ್ಲಿ ಅನೇಕ ಮಾಹಿತಿಗಳು ದೊರೆಯುತ್ತವೆ. ಸರ್ಕಾರ ರೈತರಿಗೆ ನೀಡುವ ಸಹಾಯಧನ, ಬೆಳೆಗಳ ಬಗ್ಗೆ ಮಾಹಿತಿ, ರೋಗ ನಿರ್ವಹಣೆಗಳ ಕುರಿತು ಅನುಸರಿಸಬೇಕಾದ ವೈಜ್ಞಾನಿಕ ನಿರ್ವಹಣೆ, ಆಹಾರ ಸಂಸ್ಕರಣೆಯ ಮಾಹಿತಿ, ಹೊಸ ತಂತ್ರಜ್ಞಾನಗಳ ಬಗ್ಗೆ ಮಾಹಿತಿ, ಅನೇಕ ತರಬೇತಿಗಳನ್ನು ನೀಡಲಾಗುತ್ತದೆ. ಇದನ್ನು ರೈತರು ಪಡೆದುಕೊಂಡು ಆದಾಯ ದ್ವಿಗುಣವಾಗುವತ್ತ ಹೆಜ್ಜೆ ಹಾಕಬೇಕು ಎಂದರು.

ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಜಿಲ್ಲಾ ಪಂಚಾಯತ್ ಹಾಗೂ ಸ್ಥಳೀಯ ಆಡಳಿತದ ಸಮನ್ವಯದಿಂದ ರೈತರ ಬದುಕು ಹಸನು ಮಾಡಲು ಅನೇಕ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಟೆಕ್ನಾಲಜಿಯ ಮೂಲಕ ಕೃಷಿಗೆ ಉತ್ತೇಜನ ನೀಡಿ ಸುಸ್ಥಿರ ಕೃಷಿ ಮಾಡುವಂತೆ ಪ್ರೋತ್ಸಾಹ ನೀಡಲಾಗಿದೆ ಎಂದು ತಿಳಿಸಿದರು.




ವಿಜಯಪುರ ಸಂಸದ ರಮೇಶ ಜಿಗಜಿಣಗಿ ಮಾತನಾಡಿ, ಜಿಲ್ಲೆಯು ಹಣ್ಣಿನ ಬೆಳೆ ಬೆಳಯಲು ಅನೇಕ ಅನುಕೂಲಗಳನ್ನು ಹೊಂದಿದೆ. ಜಿಲ್ಲೆಯ ನೆಲ, ಬಿಸಿಲು, ನೀರು ಬೆಳೆಗಳು ಬೆಳೆಯಲು ಪೂರಕವಾಗಿದೆ. ರೈತರು ಬೆಳೆದ ಉತ್ಪನ್ನಗಳಿಗೆ ಸೂಕ್ತ ದರ ಹಾಗೂ ಮಾರುಕಟ್ಟೆ ವ್ಯವಸ್ಥೆ ಮಾಡಬೇಕಾಗಿದೆ ಎಂದರು.

ನಾಗಠಾಣ ಶಾಸಕ ವಿಠ್ಠಲ ಧೋಂಡಿಬಾ ಕಟಕದೊಂಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡಿದ್ದರು. ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ವೇಳೆ ಎಸ್ಸಿಪಿ, ಎಸ್ಟಿಪಿ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಪೆಟ್ರೋಲ್ ಚಾಲಿತ ಸಿಂಪರಣೆ ಯಂತ್ರಗಳನ್ನು ವಿತರಿಸಲಾಯಿತು. ಅಣಬೆಯ ಮೌಲ್ಯವರ್ಧನೆ ಉತ್ಪನ್ನಗಳ ಹಾಗು ಕೃಷಿ ಪ್ರಕಟಣೆಗಳನ್ನು ಬಿಡುಗಡೆಗೊಳಿಸಲಾಯಿತು.

ವೇದಿಕೆ ಮೇಲೆ ಐಸಿಎಆರ್ ಕೃಷಿ ತಂತ್ರಜ್ಞಾನ ಅನ್ವಯಿಕ ಸಂಸೋಧನ ಸಂಸ್ಥೆ ಬೆಂಗಳೂರಿನ ನಿರ್ದೇಶಕರಾದ ಡಾ. ವಿ. ವೆಂಕಟ ಸುಬ್ರಮಣಿಯನ್, ಕೃಷಿ ವಿಶ್ವವಿದ್ಯಾಲಯ ವ್ಯವಸ್ಥಾಪನ ಮಂಡಳಿ ಸದಸ್ಯರಾದ ಜಯಕುಮಾರ ಹೆಚ್, ಶ್ರೀನಿವಾಸ್ ಕೋಟ್ಯಾನ್, ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಡಾ.ಎಸ್.ಎಸ್. ಅಂಗಡಿ, ವಿದ್ಯಾಧಿಕಾರಿ ಡಾ. ಭಿಮಪ್ಪ. ಎ, ಸಹ ವಿಸ್ತರಣಾ ನಿರ್ದೇಶಕರಾದ ಡಾ. ಆರ್. ಬಿ. ಬೆಳ್ಳಿ ಉಪಸ್ಥಿತರಿದ್ದರು.

## ರಾಜ ನುಡಿ

ದೇಹವು ಬೇಕಾದ್ದನ್ನು ಜೀರ್ಣಿಸಿಕೊಂಡು ಬೇಡವಾದದ್ದನ್ನು ತ್ಯಜಿಸುವಂತೆ, ಬೇಕು ಬೇಡವಾದ ವಿಚಾರಗಳನ್ನೂ ಪರಿಶೀಲಿಸಿ ಪ್ರತ್ಯೇಕಿಸಿ ಮನಸಿಗೆ ತೆಗೆದುಕೊಳ್ಳುವಂತಾದಾಗ ಮಾತ್ರ ಮಾನಸಿಕ ಆರೋಗ್ಯದ ಸಮತೋಲನ ಸಾಧ್ಯವಾಗುವುದು..

–ಡಾ. ರಾಜಶೇಖರ ನಾಗೂರ

**ಮಾಜಿ ಸಿಎಂ ಡಿವಿ ಸದಾನಂದಗೌಡ, ಪ್ರತಾಪ್ ಸಿಂಹಗೆ ಕೊಕ್ | ಜಿಗಜಿಣಗಿಗೆ ಟಿಕೆಟ್**

# ಲೋಕಸಭೆ ಚುನಾವಣೆ: ಬಿಜೆಪಿ ಅಭ್ಯರ್ಥಿಗಳ 2ನೇ ಪಟ್ಟಿ ಪ್ರಕಟ

ನವದೆಹಲಿ: ಲೋಕಸಭೆ ಚುನಾವಣೆಗೆ ಬಿಜೆಪಿ ರಾಜ್ಯದ 20 ಕ್ಷೇತ್ರಗಳಿಗೆ ಸೇರಿದಂತೆ 72 ಅಭ್ಯರ್ಥಿಗಳ ಎರಡನೇ ಪಟ್ಟಿಯನ್ನು ಬುಧವಾರ ಪ್ರಕಟಿಸಿದ್ದು, ಮೈಸೂರು ಸಂಸದ ಪ್ರತಾಪ್ ಸಿಂಹ ಹಾಗೂ ಮಾಜಿ ಸಿಎಂ ಡಿವಿ ಸದಾನಂದಗೌಡ ಸೇರಿದಂತೆ ಹಲವು ಹಾಲಿ ಸಂಸದರಿಗೆ ಟಿಕೆಟ್ ನಿರಾಕರಿಸಲಾಗಿದೆ.

ರಾಜ್ಯದ 28 ಕ್ಷೇತ್ರಗಳ ಪೈಕಿ 20 ಕ್ಷೇತ್ರಗಳಿಗೆ ಬಿಜೆಪಿ ಅಭ್ಯರ್ಥಿಯನ್ನು ಘೋಷಣೆ ಮಾಡಲಾಗಿದೆ.

ಈ ಬಾರಿ ಬಿಜೆಪಿ ಒಟ್ಟು 8 ಹಾಲಿ ಸಂಸದರಿಗೆ ಟಿಕೆಟ್ ನಿರಾಕರಿಸಿದೆ. ಮೈಸೂರು ಸಂಸದ, ಪ್ರತಾಪ್ ಸಿಂಹ, ಬೆಂಗಳೂರು ಉತ್ತರ ಸಂಸದ ಡಿವಿ ಸದಾನಂದ ಗೌಡ, ಕೊಪ್ಪಳ ಸಂಸದ ಕರಡಿ ಸಂಗಣ್ಣ, ಹಾವೇರಿ ಸಂಸದ ಶಿವಕುಮಾರ್ ಉದಾಸಿ, ತುಮಕೂರು ಸಂಸದ ಜಿಎಸ್ ಬಸವರಾಜು(ನಿವೃತ್ತಿ ಘೋಷಿಸಿದ್ದರು) ದಕ್ಷಿಣ ಕನ್ನಡ ಸಂಸದ ನಳಿನ್ ಕುಮಾರ್ ಕಟೀಲ್, ಚಾಮರಾಜನಗರ ಸಂಸದ ಶ್ರೀನಿವಾಸ್ ಪ್ರಸಾದ್(ನಿವೃತ್ತಿ ಘೋಷಿಸಿದ್ದರು), ಬಳ್ಳಾರಿ ಸಂಸದ ದೇವೇಂದ್ರಪ್ಪ ಅವರಿಗೆ ಬಿಜೆಪಿ ಟಿಕೆಟ್ ಕೈತಪ್ಪಿದೆ

**ಬಿಜೆಪಿ ಅಭ್ಯರ್ಥಿಗಳು:**

ಚಿಕ್ಕೋಡಿ ಲೋಕಸಭಾ ಕ್ಷೇತ್ರ-ಅಣ್ಣಾ ಸಾಹೇಬ್ ಜೊಲ್ಲೆ, ಬಾಗಲಕೋಟೆ ಲೋಕಸಭಾ ಕ್ಷೇತ್ರ-ಪಿ.ಸಿ.ಗದ್ದಿಗೌಡರ್, ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರ-ಕೋಟ ಶ್ರೀನಿವಾಸ ಪೂಜಾರಿ, ಹಾವೇರಿ ಲೋಕಸಭಾ ಕ್ಷೇತ್ರ-ಬಸವರಾಜ ಬೊಮ್ಮಾಯಿ, ಮೈಸೂರು ಕ್ಷೇತ್ರ-ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಬೆಂಗಳೂರು ಗ್ರಾಮಾಂತರ ಕ್ಷೇತ್ರ-ಡಾ.ಸಿ.ಎನ್.ಮಂಜುನಾಥ, ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರ-ಶೋಭಾ ಕರಂದ್ಲಾಜೆ, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ-ತೇಜಸ್ವಿ ಸೂರ್ಯ, ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರ-ಪಿ.ಸಿ.ಮೋಹನ್, ತುಮಕೂರು ಲೋಕಸಭಾ ಕ್ಷೇತ್ರ-ವಿ.ಸೋಮಣ್ಣ

ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರ-ಕ್ಯಾಪ್ಟನ್ ಬ್ರಿಜೇಶ್ ಚೌಟಾ, ಚಾಮರಾಜನಗರ ಲೋಕಸಭಾ ಕ್ಷೇತ್ರ-ಎಸ್.ಬಾಲರಾಜು, ಧಾರವಾಡ ಲೋಕಸಭಾ ಕ್ಷೇತ್ರ-ಪ್ರಹ್ಲಾದ್ ಜೋಶಿ, ಕೊಪ್ಪಳ ಲೋಕಸಭಾ ಕ್ಷೇತ್ರ-ಡಾ.ಬಸವರಾಜ ತ್ಯಾವಟೂರು, ದಾವಣಗೆರೆ ಲೋಕಸಭಾ ಕ್ಷೇತ್ರ-ಗಾಯತ್ರಿ ಸಿದ್ದೇಶ್ವರ್, ಬಳ್ಳಾರಿ ಲೋಕಸಭಾ ಕ್ಷೇತ್ರ-ಬಿ.ಶ್ರೀರಾಮುಲು, ಕಲಬುರಗಿ ಲೋಕಸಭಾ ಕ್ಷೇತ್ರ-ಡಾ.ಉಮೇಶ್ ಜಾಧವ್, ಬೀದರ್ ಲೋಕಸಭಾ ಕ್ಷೇತ್ರ-ಭಗವಂತ ಖೂಬಾ, ವಿಜಯಪುರ ಲೋಕಸಭಾ ಕ್ಷೇತ್ರ-ರಮೇಶ್ ಜಿಗಜಿಣಗಿ, ಶಿವಮೊಗ್ಗ ಲೋಕಸಭಾ ಕ್ಷೇತ್ರ-ಬಿ.ವೈ.ರಾಘವೇಂದ್ರ

**ಹೊಸ ಮುಖಗಳು:**

ಡಾ. ಸಿ.ಎನ್. ಮಂಜುನಾಥ್-ಬೆಂಗಳೂರು ಗ್ರಾಮಾಂತರ, ಯದುವೀರ ಕೃಷ್ಣದತ್ತ ಒಡೆಯರ್-ಮೈಸೂರು-ಕೊಡಗು, ಕ್ಯಾ. ಬ್ರಿಜೇಶ್ ಚೌಟ-ದಕ್ಷಿಣ ಕನ್ನಡ

ಕೋಟ ಶ್ರೀನಿವಾಸ ಪೂಜಾರಿ-ಉಡುಪಿ-ಚಿಕ್ಕಮಗಳೂರು, ಗಾಯತ್ರಿ ಸಿದ್ದೇಶ್ವರ-ದಾವಣಗೆರೆ, ಡಾ. ಬಸವರಾಜ ಕ್ಯಾವತ್ತೂರ್-ಕೊಪ್ಪಳ,

**ಜೆಡಿಎಸ್‌ಗೆ ಬಿಟ್ಟುಕೊಟ್ಟ ಮೂರು ಕ್ಷೇತ್ರಗಳು:**

ಮಂಡ್ಯ, ಹಾಸನ, ಕೋಲಾರ




## ಅಪಘಾತ: ಬೈಕ್ ಸವಾರ ಸಾವು, ಇರ್ವರು ವಿದ್ಯಾರ್ಥಿಗಳಿಗೆ ಗಾಯ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಬೊಲೆರೊ ಪಿಕ್‌ಅಪ್ ವಾಹನ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲಿಯೇ ಮೃತಪಟ್ಟು, ಇಬ್ಬರು ಶಾಲಾ ವಿದ್ಯಾರ್ಥಿಗಳು ಗಾಯಗೊಂಡ ಘಟನೆ ಇಂಗಳಗಿ ಕ್ರಾಸ್ ಹತ್ತಿರ ಸಂಭವಿಸಿದೆ.

ತಾಲ್ಲೂಕಿನ ಇಂಗಳಗಿ ಕ್ರಾಸ್ ಬಳಿ ಬುಧವಾರ ಈ ಘಟನೆ ಸಂಭವಿಸಿದ್ದು, ನಿವಾಳಖೇಡ ಗ್ರಾಮದಿಂದ ಬೈಕ್ ಸವಾರ ಇಬ್ಬರು ಶಾಲಾ ವಿದ್ಯಾರ್ಥಿಗಳೊಂದಿಗೆ ಬರುತ್ತಿರುವ ಸಮಯದಲ್ಲಿ ದೇವರ ಹಿಪ್ಪರಗಿಯಿಂದ ಇಂಡಿ ಕಡೆಗೆ ತೆರಳುತ್ತಿದ್ದ ಬೊಲೆರೊ ವಾಹನ ಡಿಕ್ಕಿಯಾಗಿ ಅಪಘಾತ ಸಂಭವಿಸಿದೆ.

ಅಪಘಾತದಲ್ಲಿ ಬೈಕ್ ಸವಾರ ನಿವಾಳಖೇಡ ಗ್ರಾಮದ ನಿವಾಸಿ ಈರಣ್ಣ ಬಾಬು ಇಂಡಿ (23) ಸ್ಥಳದಲ್ಲಿಯೇ ಮೃತಪಟ್ಟರೇ, ವಿದ್ಯಾರ್ಥಿಗಳಾದ ಸಚೀನ ಬಸವರಾಜ ಹಡಗಲಿ(15) ಹಾಗೂ ಚಂದ್ರಕಾಂತ ರಾಘವೇಂದ್ರ ತಳವಾರ (15) ಇವರಿಗೆ ತೀವ್ರವಾದ ಗಾಯಗಳಾಗಿದ್ದು ವಿಜಯಪುರ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಪಘಾತ ಸ್ಥಳಕ್ಕೆ ದೇವರಹಿಪ್ಪರಗಿ ಪೊಲೀಸ್ ಸಿಬ್ಬಂದಿ ಭೇಟಿ ನೀಡಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಬೇಡಿಕೆ ಈಡೇರಿಕೆಗೆ ಡಿಎಸ್ಸೆಸ್ ಅನಿರ್ಧಿಷ್ಠ ಧರಣಿ





**ಉದಯರಶ್ಮಿ ನ್ಯೂಸ್**

ಆಲಮೇಲ: ಪಟ್ಟಣದಲ್ಲಿನ ಮನೆಗಳ ಹಂಚಿಕೆಯಲ್ಲಿ ಅಕ್ರಮ ಹಾಗೂ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ದಲಿತ ಸಂಘರ್ಷ ಸಮಿತಿಯ (ಅಂಬೇಡ್ಕರವಾದ) ಪಧಾದಿಕಾರಿಗಳು ಮಂಗಳವಾರ ಪಟ್ಟಣ ಪಂಚಾಯತಿ ಎದುರು ಅನಿರ್ಧಿಷ್ಠಾವಧಿ ಧರಣಿ ಸತ್ಯಾಗ್ರಹ ಹಮ್ಮಿಕೊಂಡು ಬುಧವಾರ ಎರಡು ದಿನ ಪೂರ್ಣಗೊಂಡರೂ ಇಲ್ಲಿವರೆಗೂ ಯಾವುದೆ ಅಧಿಕಾರಿಗಳು ಸಮಸ್ಯೆ ಆಲಿಸಲು ಬಾರದ್ದರಿಂದ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಡಾ| ಬಿ.ಆರ್. ಅಂಬೇಡ್ಕರ್ ಯುವಕ ಸಂಘದ ತಾಲೂಕ ಸಂಚಾಲಕ ಶಿವು ಮೇಲಿನಮನಿ, ಹರಿಷ ಎಂಟಮಾನ ಮಾತನಾಡಿ, ಪಟ್ಟಣಲ್ಲಿನ ಅನೇಕ ಸಮಸ್ಯೆಗಳ ಬಗ್ಗೆ ಸಂಬಂಧಪಟ್ಟ ಜನಪ್ರತಿನಿಧಿಗಳಿಗೆ, ಅಧಿಕಾರಿಗಳಿಗೆ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಅದರಿಂದ ಬೆಸತ್ತು ಧರಣಿ ಸತ್ಯಾಗ್ರಹ ಹಮ್ಮಿಕೊಂಡಿದ್ದೇವೆ. ಧರಣಿ ಸತ್ಯಾಗ್ರಹ ಸ್ಥಳಕ್ಕೆ ಜಿಲ್ಲಾ ಅಧಿಕಾರಿಗಳು ಆಗಮಿಸಿ ಇಲ್ಲಿನ ಸಮಸ್ಯೆಗಳು ಆಲಿಸಿ ನಮ್ಮೆಲ್ಲ ಬೇಡಿಕೆಗಳಿಗೆ ಲಿಖಿತ ಭರವಸೆ ನೀಡುವವರೆಗೂ ಧರಣಿ ಸತ್ಯಾಗ್ರಹ ಮುಂದುವರೆಯಲಿದೆ ಎಂದರು.

> ಪಟ್ಟಣ ಪಂಚಾಯಿತಿ ಮುಂದೆ ಹಮ್ಮಿಕೊಂಡಿರುವ ಧರಣಿ ಸತ್ಯಾಗ್ರಹಿಗಳ ಬೇಡಿಕೆಗಳು ಬಹಳ ಇವೆ, ಅವು ಎಲ್ಲವು ಸಧ್ಯದಲ್ಲೇ ಈಡೇರಿಸಲು ಪಂಚಾಯತಿಯಲ್ಲಿ ಹಣದ ಕೊರತೆ ಇದೆ, ಅವಶ್ಯಕತೆ ಇದ್ದಂತಹ ಸಮಸ್ಯೆಗಳನ್ನು ಬಗೆ ಹರಿಸುವುದಾಗಿ ಹೇಳಿದರೂ ಅವರು ಒಪ್ಪುತ್ತಿಲ್ಲ, ಈ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದು.
>
> – ಸುರೇಶ ನಾಯಕ,
> ಪ.ಪಂ ಮುಖ್ಯಾಧಿಕಾರಿ, ಆಲಮೇಲ



## ವಚನ ಚಿಂತನ 322

**ಕರಸ್ಥಲದ ಚುಳುಕು**

*ಪಾತಾಳವಿತ್ತಿತ್ತ, ಪಾದಂಗಳತ್ತತ್ತ,*
*ದಶದಿಕ್ಕು ಇತ್ತಿತ್ತ, ದಶಭುಜಂಗಳತ್ತತ್ತ,*
*ಬ್ರಹ್ಮಾಂಡವಿತ್ತಿತ್ತ, ಮಣಿಮುಕುಟವತ್ತತ್ತ,*
*ಚೆನ್ನಮಲ್ಲಿಕಾರ್ಜುನಯ್ಯಾ,*
*ನೀವೆನ್ನ ಕರಸ್ಥಲಕ್ಕೆ ಬಂದು ಚುಳುಕಾದಿರಲ್ಲಾ ಲಿಂಗವೆ.*
*– ಅಕ್ಕಮಹಾದೇವಿಯವರು*

ಬಸವಣ್ಣನವರ ವಚನಗಳು ಅಂದು ಇತರೆ ಶರಣರ ಮೇಲೆ ಪ್ರಭಾವ ಬೀರಿದ್ದವು ಎಂಬುದಕ್ಕೆ ಈ ವಚನವೇ ಸಾಕ್ಷಿ. ಅಲ್ಲಿ ಬಸವಣ್ಣನವರು ಕೂಡಲಸಂಗಮದೇವರ ಸ್ವರೂಪವನ್ನು ವಿವರಿಸಿದಂತೆ ಜಗದಗಲ ಮುಗಿಲಗಲ ಮಿಗೆಯಗಲ ನಿಮ್ಮಗಲ, ಪಾತಾಳದಿಂದವೆ ಅತ್ತತ್ತ ನಿಮ್ಮ ಶ್ರೀಚರಣ, ಬ್ರಹ್ಮಾಂಡದಿಂದವೆ ಅತ್ತತ್ತ ನಿಮ್ಮ ಶ್ರೀಮಕುಟ, ಅಗಮ್ಯ ಅಗೋಚರ ಅಪ್ರತಿಮ ಲಿಂಗವೆ, ಕೂಡಲ ಸಂಗಮದೇವಯ್ಯಾ, ಎನ್ನ ಕರಸ್ಥಲಕ್ಕೆ ಬಂದು ಚುಳುಕಾದಿರಯ್ಯಾ. ಎಂದಿರುವ ಧಾಟಿಯಲ್ಲೇ ಅಕ್ಕಮಹಾದೇವಿಯವರು ಚೆನ್ನಮಲ್ಲಿಕಾರ್ಜುನ ನಿಲುವನ್ನು ನಿರೂಪಿಸಿದ್ದಾರೆ. ಅದರೆ ಇಲ್ಲಿ ನಾವು ಕಾಣುವ ಪ್ರಮುಖ ವ್ಯತ್ಯಾಸವೆಂದರೆ ಅಕ್ಕಮಹಾದೇವಿಯವರು ಚೆನ್ನಮಲ್ಲಿಕಾರ್ಜುನನ (ಮಹಾಲಿಂಗ) ನಿಜ ನಿಲುವಿನೆದರು ಪಾತಾಳ, ದಶದಿಕ್ಕು ಮತ್ತು ಬ್ರಹ್ಮಾಂಡಗಳು ಇತ್ತಿತ್ತ(ಸಂಕುಚಿತ/ಚಿಕ್ಕವು)ಎನ್ನುವಲ್ಲಿ ಜಗವೆಲ್ಲಾ ವ್ಯಾಪಿಸಿರುವ ಮಹಾಲಿಂಗದ ಪಾದ, ದಶಭುಜ, ಮಣಿಮುಖುಟಗಳೇ ಜಗದ್ವ್ಯಾಪಿಸಿವೆ ಎನ್ನುವಲ್ಲಿ ಆಧುನಿಕ ವಿಜ್ಞಾನಿಗಳು ಅಳೆದಂತೆ ನಮ್ಮ ಗೋಚರ ಬ್ರಹ್ಮಾಂಡದ ವ್ಯಾಪ್ತಿ 46.5 billion light-years and its diameter about 28.5 gigaparsecs (93 billion light-years, 8.8×1023kilometres or 5.5×1023 miles). ಇದರ ಆಚೆಗಿನ ಬ್ರಹ್ಮಾಂಡದ ವಿಸ್ತಾರವನ್ನು ಶರಣರು ಕಂಡಿರುವುದನ್ನು ಅವರು ವಚನಗಳಿಂದ ಅರಿಯಬಹುದು.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

**ವಿಜಯಪುರಕ್ಕೆ ಬೃಹತ್ ಪವನ ವಿದ್ಯುತ್ ಘಟಕ | ಯುವಕರಿಗೆ ಉದ್ಯೋಗಾವಕಾಶ | ಕೈಗಾರಿಕಾ ಕ್ರಾಂತಿಗೆ ನಾಂದಿ**

# ಸಚಿವ ಎಂ.ಬಿ.ಪಾಟೀಲರ ಕಾರ್ಯ ಅಭಿನಂದನಾರ್ಹ :ಬಬಲೇಶ್ವರ

**ಉದಯರಶ್ಮಿ ನ್ಯೂಸ್**

ವಿಜಯಪುರ: ದೇಶದ ಎರಡನೇ ದೊಡ್ಡ ಪವನ ವಿದ್ಯುತ್ ಘಟಕವನ್ನು ತವರು ಜಿಲ್ಲೆ ವಿಜಯಪುರಕ್ಕೆ ತರಲು ಶ್ರಮಿಸುವುದರ ಮೂಲಕ ಜಿಲ್ಲೆಯಲ್ಲಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಿ ಕೈಗಾರಿಕಾ ಕ್ರಾಂತಿಗೆ ಮುಂದಡಿ ಇಡುವುದರ ಮೂಲಕ ನಿರುದ್ಯೋಗಿ ಯುವಕರಿಗೆ ಬದುಕು ಕಟ್ಟಿಕೊಡಲು ಮುಂದಾಗಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಸಚಿವ ಡಾ. ಎಂ.ಬಿ ಪಾಟೀಲ್ ರವರ ಕಾರ್ಯ ಅಭಿನಂದನಾರ್ಹ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿಯ ಮುಖ್ಯ ವಕ್ತಾರ ಸಂಗಮೇಶ್ ಬಬಲೇಶ್ವರ ತಿಳಿಸಿದ್ದಾರೆ.

ಬುಧವಾರ ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಎಂ ಬಿ ಪಾಟೀಲರು ನೀರಾವರಿ ಸಚಿವರಾಗಿದ್ದಾಗಿನ (2013 ರಿಂದ 2018 ರ) ಅವಧಿಯು ಬಸವ ನಾಡಿನ ಜನತೆಯ ಪಾಲಿಗೆ ಅದೊಂದು ನೀರಾವರಿ ಕ್ಷೇತ್ರದ ಅಭಿವೃದ್ಧಿಯ ಸುವರ್ಣ ಯುಗವಾಗಿತ್ತು. ಎಂ ಬಿ ಪಾಟೀಲರ ಕರ್ತೃತ್ವ ಶಕ್ತಿ ಮತ್ತು ದೂರ ದೃಷ್ಟಿಯಿಂದಾಗಿ ಬರದ ನಾಡು ಬಂಗಾರದ ನಾಡಾಗಿ ಇಂದು ಕಡು ಬೇಸಿಗೆಯಲ್ಲಿ ಜನ ನೆಮ್ಮದಿಯ ನಿಟ್ಟುಸಿರುಬಿಡಲು ಕಾರಣವಾಗಿದೆ. ಅಂದಿನ ಹಸಿರು ಕ್ರಾಂತಿ ಮಾಡಿದ ಪಾಟೀಲರು ಮತ್ತೆ ತಮ್ಮ ಪ್ರಾಮಾಣಿಕ ಕಳಕಳಿ ಮತ್ತು ಪ್ರಯತ್ನದಿಂದ ಇದೀಗ ಕೈಗಾರಿಕಾ ಕ್ರಾಂತಿ ಮಾಡಲು ಮುಂದಾಗಿರುವುದು ಹಾಗೂ ಸೌರ ವಿದ್ಯುತ್ ಕ್ಷೇತ್ರದ ದೈತ್ಯ ಕಂಪನಿಗಳಾಗಿರುವ ಸುಜ್ಲಾನ ಮತ್ತು ರೇನಸಾನ್ಸ್ ಕಂಪನಿಗಳು 36,000 ಕೋಟಿ ಹೂಡಿಕೆ ಮಾಡಲು ಮುಂದಾಗಿರುವುದು ವಿಜಯಪುರ ಜಿಲ್ಲೆಯ ಜನತೆಗೆ ಸಂತೋಷವನ್ನುಂಟು ಮಾಡಿದೆ. ಕಾರಣ ಜಿಲ್ಲೆಯ ಯುವಕರು ಹಾಗೂ ಜನತೆಯ ಪರವಾಗಿ ಸಚಿವ ಡಾ. ಎಂಬಿ ಪಾಟೀಲ್ ರವರಿಗೆ ತುಂಬು ಹೃದಯದ ಕೃತಜ್ಞತೆ ಮತ್ತು ಅಭಿನಂದನೆ ಸಲ್ಲಿಸುವುದಾಗಿ ಸಂಗಮೇಶ್ ಬಬಲೇಶ್ವರ ತಿಳಿಸಿದ್ದಾರೆ.



## ಭೀಮೆಗೆ ನೀರು ಹರಿಸಲು ಡಿಸಿಎಂ ಗೆ ಮನವಿ



**ಉದಯರಶ್ಮಿ ನ್ಯೂಸ್**

ಅಫಜಲಪುರ: ಭೀಮಾ ನದಿ ಬತ್ತಿರುವದರಿಂದ ನೆರೆ ಮಹಾರಾಷ್ಟ್ರದ ಉಜನಿ ಜಲಾಶಯದಿಂದ ಅಥವಾ ತಾತ್ಕಾಲಿಕವಾಗಿ ಬಸವಸಾಗರ ಜಲಾಶಯದಿಂದ ಕಾಲುವೆ ಮೂಲಕ ನೀರು ಹರಿಸುವಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕಲಬುರಗಿ ನಗರಕ್ಕೆ ಆಗಮಿಸಿದ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಅವರಿಗೆ ರೈತರು ಮನವಿ ಸಲ್ಲಿಸಿದರು.

ಈ ವೇಳೆ ರಾಜ್ಯ ಕಬ್ಬು ಬೆಳೆಗಾರರ ಸಂಘದ ಜಿಲ್ಲಾಧ್ಯಕ್ಷ ರಮೇಶ್ ಹೂಗಾರ ಮಾತನಾಡಿ, ಈ ಬಾರಿ ರಾಜ್ಯದಲ್ಲಿ ಮಳೆ ಇಲ್ಲದೆ ಬೆಳೆಗಳು ಸಂಪೂರ್ಣ ಹಾಳಾಗಿ ಹೋಗಿದ್ದು ಜನ, ಜಾನುವಾರುಗಳು ಕುಡಿಯುವ ನೀರಿಗಾಗಿ ಪರಿತಪಿಸುವಂತಾಗಿದೆ. ಹೀಗಾಗಿ ಬರಗಾಲ ಹಿಡಿದ ಪ್ರದೇಶ ಎಂದು ಘೋಷಿಸಿ ಪ್ರತಿ ಎಕರೆಗೆ ರೂ.25,000 ಅಂತೆ ಪರಿಹಾರ ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಧರ್ಮರಾಜ್ ಸಾವು, ಭಾಗಣ್ಣ ಕುಂಬಾರ, ಕಂಟೆಪ್ಪ ಹನೂರು,


ರೇವಣಸಿದ್ದಯ್ಯ, ಮಲ್ಲು ಸೋಲಾಪುರ ಸೇರಿದಂತೆ ಇತರರು ಇದ್ದರು.

# ಪೈ($\pi$) -ಜಗತ್ತಿನ ಅದ್ಭುತ ಅನ್ವೇಷಣೆ

**ಉದಯರಶ್ಮಿ ದಿನಪತ್ರಿಕೆ**


ಇಂದು ವಿಶ್ವ ಪೈ ದಿನ .ಪೈ ಅನ್ನು ಜಗತ್ತಿನ ಅದ್ಭುತ ಅನ್ವೇಷಣೆ ಎಂದು ಕರೆಯುತ್ತಾರೆ. ಗ್ರೀಕ್ ಭಾಷೆಯ ಈ ಪದದಿಂದ ಗಣಿತದ ಕಠಿಣ ಸೂತ್ರಗಳನ್ನು ಸುಲಭವಾಗಿ ಬಿಡಿಸಬಹುದು. ಗಣಿತದ ಪೈ ನ ಜನಪ್ರಿಯತೆಯಿಂದಾಗಿ ಒಂದು ವಿಶೇಷ ದಿನವನ್ನು ನಿಗದಿಗೊಳಿಸಲಾಗಿದೆ. ಆ ದಿನವೇ ಮಾರ್ಚ್ 14. ಈ ದಿನವನ್ನು ವಿಶ್ವದೆಲ್ಲೆಡೆ ಪೈ ಡೇ ಎಂದು ಆಚ-'ರಿಸಲಾಗುತ್ತದೆ.

ಪೈ" ಎಂದು ಉಚ್ಚರಿಸುವ ಗಣಿತದ ಸ್ಥಿರಾಂಕ (ϖ), ವೃತ್ತದ ಸುತ್ತಳತೆಯ ಅನುಪಾತವನ್ನು ಅದರ ವ್ಯಾಸಕ್ಕೆ ಪ್ರತಿನಿಧಿಸುತ್ತದೆ. ಇದು



– ಸಂತೋಷ ಎಸ್ ಬಂಡೆ
ಶಿಕ್ಷಕರು, ನಾಗಠಾಣ

ವಿಶೇಷ ಸಂಖ್ಯೆ ಏಕೆಂದರೆ, ವೃತ್ತವು ಎಷ್ಟೇ ದೊಡ್ಡದಾಗಿರಲಿ ಅಥವಾ ಚಿಕ್ಕದಾಗಿರಲಿ, ಈ ಅನುಪಾತವು ಯಾವಾಗಲೂ ಒಂದೇ ಆಗಿರುತ್ತದೆ. ಇದು ಭೌತಶಾಸ್ತ್ರ, ಗಣಿತ, ಕಲೆ ಮತ್ತು ಎಂಜಿನಿಯರಿಂಗ್‌ನಂತಹ ವಿವಿಧ ಕ್ಷೇತ್ರಗಳಲ್ಲಿ ಮೂಲಭೂತ ಸ್ಥಿರತೆಯನ್ನು ಮಾಡುತ್ತದೆ. ಇದರ ಅಂದಾಜು ಮೌಲ್ಯ 3.14159 ಎಂದು ಹೇಳಲಾಗುತ್ತಿದೆ. ಇದರ ದಶಮಾಂಶ ಸಂಖ್ಯೆ ಕೊನೆಗೊಳ್ಳುವುದೇ ಇಲ್ಲ. ವೃತ್ತ, ದೀರ್ಘ ವೃತ್ತ, ಗೋಳಗಳ ಮೌಲ್ಯ ಕಂಡು ಹಿಡಿಯಲು ಪೈ ಬೇಕೇ ಬೇಕು. ಈ ಪದವನ್ನು ಕಾಸ್ಮೊಲಾಜಿ, ಥರ್ಮೊಡೈನಾಮಿಕ್ಸ್, ಮೆಕ್ಯಾನಿಕ್ಸ್ ಮತ್ತು, ಎಲೆಕ್ಟ್ರೋವ್ಯಾಗ್ನೆಟಿಕ್ ಕ್ಷೇತ್ರಗಳಲ್ಲಿ ಹೆಚ್ಚು ಬಳಸಲಾಗುತ್ತದೆ.




ಗಣಿತ ಮತ್ತು ಭೌತ ವಿಜ್ಞಾನದಲ್ಲಿ ಎಲ್ಲೆಲ್ಲಿ ವೃತ್ತ ಬರುತ್ತದೆಯೊ ಅಲ್ಲೆಲ್ಲ ಪೈ ಪ್ರತ್ಯಕ್ಷ. ಕ್ರಿಸ್ತ ಪೂರ್ವದ ದಿನಗಳ ಬೆಬಿಲೊನಿಯಾ, ಈಜಿಪ್ಟ್ ಗಣಿತಜ್ಞ-ರಿಗೆ ಪೈ ಬೆಲೆ ಸರಿ ಸುಮಾರು 3.1 ಎಂದು ತಿಳಿದಿತ್ತು. ಒಂದು ವೃತ್ತಕ್ಕೆ ಅದರದ್ದೇ ಆದ ಒಂದು ನಿರ್ದಿಷ್ಟ ಪರಿಧಿ ಎಂಬುದಿದೆ. ವೃತ್ತದ ಗೆರೆಯ ಮೇಲೆ ಒಂದು ಬಿಂದುವಿನಿಂದ ಹೊರಟ ನೀವು ಮತ್ತೆ ಅದೇ ಬಿಂದುವಿಗೆ ತಲುಪುತ್ತೀರಿ . ಗೆರೆಯ ಮೇಲೆ ನೀವು ಕ್ರಮಿಸಿದ ದೂರವೇ ಆ ವೃತ್ತದ ಪರಿಧಿ. ವೃತ್ತದ ಪರಿಧಿಯನ್ನು ಅದರ ವ್ಯಾಸದಿಂದ ಭಾಗಿಸಿದರೆ ದೊರೆಯುವ ನಿಷ್ಪತ್ತಿ (ಭಾಗಲಬ್ಧ) ಒಂದು ಸಂಖ್ಯೆ ಮಾತ್ರವಲ್ಲ . ಅದೊಂದು ನಿಯತಾಂಕ. ಈ ನಿಯತಾಂಕವೇ ಪೈ. ಒಂದು ವೃತ್ತದ ವ್ಯಾಸ ಇನ್ನೊಂದು ವೃತ್ತದ ವ್ಯಾಸದ ದುಪ್ಪಟ್ಟು ಇದ್ದರೆ, ಅದರ ಪರಿಧಿಯು ದುಪ್ಪಟ್ಟಾಗುತ್ತದೆ. ಆದರೆ ಇವರೆಡರ ನಿಷ್ಪತ್ತಿ ಮಾತ್ರ ಒಂದೇ . ಅದುವೇ ಪೈ. ಪೈ ಸೂಚಿತವಾಗಿರುವುದು ಗ್ರೀಕ್ ವರ್ಣಮಾಲೆಯ ಅಕ್ಷರದಿಂದ.

ಬ್ರಿಟಿಷ್ ಗಣಿತಜ್ಞ ವಿಲಿಯಮ್ ಜೋನ್ಸ್ (1675–1749) ಪೈ ಅಕ್ಷರವನ್ನು ಅನುಪಾತವನ್ನು ಪ್ರತಿನಿಧಿಸಲು ಬಳಸಿದ ಮೊದಲ ಗಣಿತಜ್ಞ. ಇವರು ಇದನ್ನು 1706ರಲ್ಲಿ ಗಣಿತಶಾಸ್ತ್ರಕ್ಕೆ ಹೊಸ ಪರಿಚಯ ಎಂಬ ತಮ್ಮ ಪುಸ್ತಕದಲ್ಲಿ ಉಪಯೋಗಿಸಿದರು. ಆತನ ಸಮಕಾಲೀನ ಮತ್ತು ಶ್ರೇಷ್ಠ ಗಣಿತ ಶಾಸ್ತ್ರಜ್ಞ ಸ್ವಿಜರ್ಲೆಂಡ್‌ನ ಲಿಯಾನಾರ್ಡೊ ಆಯ್ಲರ್ (1700–1783) ಅದನ್ನೇ ಮತ್ತೆ ಮತ್ತೆ ತಮ್ಮ ಸಂಶೋಧನ ಲೇಖನಗಳಲ್ಲಿ ಬಳಸುತ್ತ ಪ್ರಚಾರಕ್ಕೆ ತಂದು ಅದಕ್ಕೊಂದು ಅಮರತ್ವ ನೀಡಿದರು. 1736ಕ್ಕೂ

**ಇಂದು ವಿಶ್ವ ಪೈ ದಿನ**

ಮುನ್ನ ವೃತ್ತದ ಸುತ್ತಳತೆ ಮತ್ತು ಅನುಪಾತವನ್ನು ಕಂಡು ಹಿಡಿಯಲು ಸಿ ಮತ್ತು ಪಿ ಎಂಬ ಅಕ್ಷರಗಳನ್ನು ಉಪಯೋಗಿಸಲಾಗುತಿತ್ತು.

ನಾವು ಸಾಮಾನ್ಯವಾಗಿ ಪೈ ಅಂ-ದೊಡನೆ 22/7 ಎಂದು ಬರೆಯುತ್ತೇವೆ. ಇದು ಸುಪ್ರಸಿದ್ಧ. ಈ ಬಗೆಯನ್ನು ಸೂಚಿಸಿದವನು ಗ್ರೀಕ್‌ನ ಗಣಿತಜ್ಞ ಹಾಗೂ ಭೌತ ವಿಜ್ಞಾನಿ ಆರ್ಕಿಮಿಡಿಸ್. ವೃತ್ತ ಒಳ ಮತ್ತು ಹೊರಗೆ ಹಿಡಿಸುವಂತೆ ಬಹುಭುಜಾಕೃತಿಯನ್ನು ಎಳೆದದ್ದಾದರೆ, ಒಳಗಿನ ಬಹುಭುಜದ ಸುತ್ತಳತೆ ಮತ್ತು




ಹೊರಗಿನ ಬಹುಭುಜದ ಸುತ್ತಳತೆಯ ನಡುವಣ ಬೆಲೆ ಪೈ ಆಗಿರುತ್ತದೆಂದು ಹೇಳಿದ್ದಲ್ಲದೆ ಪೈ ಬೆಲೆಯನ್ನು ಸರಿ ಸುಮಾರಾಗಿ 223/71 ಮತ್ತು22/7 ಇವೆರಡರ ನಡುವೆ ಇದೆ ಎಂದು ನಿರೂಪಿಸಿದ. 22/7 ಗರಿಷ್ಠ ಬೆಲೆ ನೀಡುತ್ತದೆ ಮತ್ತು ನೆನಪಿಡಲು ಸುಲಭ ಎಂದೇ ಇದು ಜನಪ್ರಿಯವಾಯಿತು.

**– ಸಂತೋಷ ಎಸ್ ಬಂಡೆ**
ಶಿಕ್ಷಕರು, ನಾಗಠಾಣ

# ಬಿಎಲ್ಡಿಇ ಆಸ್ಪತ್ರೆ: ಮಾ.16ವರೆಗೆ ಗ್ಲೋಕೋಮಾ ಉಚಿತ ಶಿಬಿರ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಗತ್ತಿನ ಶೇ.80 ರಷ್ಟು ಜನರು ದೃಷ್ಟಿದೋಷದಿಂದ ಬಳಲುತ್ತಿದ್ದಾರೆ. ಇದಕ್ಕೆ ಸೂಕ್ತ ಚಿಕಿತ್ಸೆ ಪಡೆಯದಿದ್ದರೆ ನರಗಳ ದೌರ್ಬಲ್ಯ ಕುರುಡುತನಕ್ಕೆ ಕಾರಣವಾಗಬಹುದು ಎಂದು ಬಿ.ಎಲ್.ಡಿ.ಇ ಡೀವ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ್ ಆಸ್ಪತ್ರೆ ನೇತ್ರ ವಿಭಾಗದ ಮುಖ್ಯಸ್ಥೆ ಡಾ. ರೇಖಾ ಮುಧೋಳ ಹೇಳಿದ್ದಾರೆ.

ಬಿ.ಎಲ್.ಡಿ.ಇ ಡಿವ್ಡ್ ವಿವಿಯ ಶ್ರೀ ಬಿ. ಎಂ. ಪಾಟೀಲ್ ವೈದ್ಯಕಿಯ ಕಾಲೇಜು, ಆಸ್ಪತ್ರೆಯಲ್ಲಿ ಮಂಗಳವಾರ ನಡೆದ ಗ್ಲೋಕೋಮಾ ಕಾಯಿಲೆ ಜಾಗೃತಿ ಕಾರ್ಯಾಗಾರದಲ್ಲಿ ಮಾತನಾಡಿದರು.

ಭಾರತದಲ್ಲಿ 4.50 ಮಿಲಿಯನ್ ಮತ್ತು ಜಗತ್ತಿನಲ್ಲಿ 80 ಮಿಲಿಯನ್ ಜನರು ಗ್ಲೋಕೋಮಾ ಕಾಯಿಲೆಯಿಂದ ಬಳಲುತ್ತಿದ್ದಾರೆ. ಈ ಕಾಯಿಲೆಯನ್ನು ನಿರ್ಲಕ್ಷಿಸದೆ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬೇಕು. ಇಲ್ಲದಿದ್ದರೆ ಕಣ್ಣಿನ ಪೊರೆ ನಂತರ ನರಗಳ ದೌರ್ಬಲ್ಯದಿಂದ ಕುರುಡರಾಗಬಹುದು. ಗ್ಲೋಕೋಮಾ



ಕಾಯಿಲೆ ಹೊಂದಿರುವ ರೋಗಿಗಳಲ್ಲಿ ತಲೆನೋವು, ದೃಷ್ಟಿ ಕ್ಷೀಣಿಸುವುದು ಹಾಗೂ ಕೆಲವರಲ್ಲಿ ಲಕ್ಷಣಗಳು ಕಂಡು ಬರದಿರಬಹುದು. ಈ ಕಾಯಿಲೆಯು 40ವರ್ಷಕ್ಕಿಂತ ಮೇಲ್ಪಟ್ಟ ಜನರ ಮೇಲೆ ಹೆಚ್ಚಿನ ಪರಿಣಾಮ ಬೀರುತ್ತದೆ. ಅಧಿಕ ರಕ್ತದೊತ್ತಡ, ಮಧುಮೇಹ ರೊಗಿಗಳಲ್ಲಿ ಹಾಗೂ ದಪ್ಪ ಕನ್ನಡಕವನ್ನು ಬಳಸುವವರಲ್ಲಿ ಹೆಚ್ಚಾಗಿ ಕಂಡು ಬರುತ್ತದೆ ಎಂದು ಅವರು ಹೇಳಿದರು.

ಕಣ್ಣಿನ ಸಮಸ್ಯೆಗೆ ಸಂಬಂಧಿಸಿದಂತೆ ಆಸ್ಪತ್ರೆಯ ನೇತ್ರ ವಿಭಾಗ ವೈದ್ಯರ ಸಲಹೆ ಪಡೆದುಕೊಳ್ಳಬೇಕು. ಬಿ.ಎಲ್.ಡಿ.ಇ ಆಸ್ಪತ್ರೆಯಲ್ಲಿ ಮಾರ್ಚ 16ರ ವರೆಗೆ ಗ್ಲೋಕೋಮಾ ಉಚಿತ ಶಿಬಿರ ಆಯೋಜಿಸಲಾಗಿದ್ದು, ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಅವರು ಹೇಳಿದರು.

ಜಿಲ್ಲಾ ಕುಷ್ಟರೋಗ ನಿರ್ಮೂಲನಾಧಿಕಾರಿ ಡಾ. ಸಂಪತ ಎಂ. ಗುಣಾರಿ ಮಾತನಾಡಿ, ಜಿಲ್ಲೆಯಲ್ಲಿ ಕಣ್ಣಿನ ತೊಂದರೆಯಿಂದ ಬಳಲುವವರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಇದಕ್ಕೆ ಪ್ರತಿವಾರ 60 ರೋಗಿಗಳ ಶಸ್ತ್ರಚಿಕಿತ್ಸೆ ಮಾಡಲಾಗುತ್ತಿದೆ. ಈ ಕಾರ್ಯದಲ್ಲಿ ಬಿ.ಎಲ್.ಡಿ.ಇ ಡಿಮ್ಡ್ ವಿವಿ ಶ್ರೀ ಬಿ. ಎಂ. ಪಾಟೀಲ್ ವೈದ್ಯಕೀಯ ಆಸ್ಪತ್ರೆ ಹೆಚ್ಚಿನ ಶಸ್ತ್ರಚಿಕಿತ್ಸೆ ಮಾಡುವ ಮೂಲಕ ದೃಷ್ಠಿದೋಷ ಹೊಂದಿರುವ ರೋಗಿಗಳಿಗೆ ಸ್ಪಂದಿಸುತ್ತಿದೆ ಎಂದು ಹೇಳಿದರು.

ಬಿ.ಎಲ್.ಡಿ.ಇ ಡಿವ್ಡ್ ವಿವಿ ಕುಲಪತಿ ಡಾ. ಆರ್. ಎಸ್. ಮುಧೋಳ ಗ್ಲೋಕೋಮಾ ಜಾಗೃತಿ ಕರಪತ್ರಗಳನ್ನು ಬಿಡಗಡೆ ಮಾಡಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯ ಅಧಿಕ್ಷಕರು ಡಾ. ರಾಜೇಶ ಹೊನ್ನುಟಗಿ, ಡಾ. ಸುನೀಲ ಜಿ. ಬಿರಾದಾರ ಮುಂತಾದವರು ಉಪಸ್ಥಿತರಿದ್ದರು.

# ವಿಜಯಪುರ ಜಿಲ್ಲಾ ಕೃಷಿಯೆತರ ಪತ್ತಿನ ಸಹಕಾರಿ ಸಂಘದ ಒಕ್ಕೂಟ ಆಡಳಿತ ಮಂಡಳಿ ಚುನಾವಣೆಗೆ ಅವಿರೋಧ ಆಯ್ಕೆ

**ಉದಯರಶ್ಮಿ ನ್ಯೂಸ್**

': ಜಿಲ್ಲಾ ಕೃಷಿಯೆತರ ಪತ್ತಿನ ಸಹಕಾರಿ ಸಂಘದ ಒಕ್ಕೂಟದ ಚುನಾವಣೆ ಅವಿರೋಧವಾಗಿ ನಡೆದಿದ್ದು, ಈ ಕೆಳಗಿನ ಸದಸ್ಯರು ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿ ಹಾಗೂ ಸಹಕಾರ ಸಂಘಗಳ ಉಪನಿಬಂಧಕರಾದ ಎಸ್ ಕೆ ಭಾಗ್ಯಶ್ರೀ ಘೋಷಿಸಿದ್ದಾರೆ.



ವಿಜಯಪುರ ನಗರ ಮತಕ್ಷೇತ್ರದಿಂದ ಪತ್ರಕರ್ತ ದೀಪಕ ಶಿಂತ್ರೆ, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಆಡಳಿತ ಮಂಡಳಿ ಸದಸ್ಯ ಗುರುಶಾಂತ ನಿಡೋಣಿ, ಮಹಾನಗರ ಪಾಲಿಕೆ ಸದಸ್ಯ ರಾಜಶೇಖರ್ ಮಗ್ಗಿಮಠ, ಪರಶುರಾಮ ಚಿಂಚಲಿ, ಡಾ.ಸದಾಶಿವ ಪವಾರ, ನಬಿಸಾಬ್ ಕರ್ಜಗಿ, ಇಂಡಿ ತಾಲೂಕಾ ಮತಕ್ಷೇತ್ರ ದಿಂದ ಶ್ರೀಮಂತ ಇಂಡಿ, ವಿಜಯಪುರ ಗ್ರಾಮೀಣ ಕ್ಷೇತ್ರದಿಂದ ಬಸವರಾಜ ಬಂಡಿ, ಮುದ್ದೇಬಿಹಾಳ ಮತಕ್ಷೇತ್ರದಿಂದ ಬಸವರಾಜ ಇಸ್ಲಾಂಪುರ, ಬಸವನಬಾಗೇವಾಡಿಯಿಂದ ಸಿದ್ದಪ್ಪ ಬಾಳಗೊಂಡ, ಸಿಂದಗಿ ಮತಕ್ಷೇತ್ರ ದಿಂದ ಡಾ.ರಾಮರಾವ ನಾಯಕ ಚಡಚಣ ಕ್ಷೇತ್ರದಿಂದ ಬಸವರಾಜ ಸಾವಕಾರ ಅವಿರೋಧ ಆಯ್ಕೆಯಾಗಿದ್ದಾರೆ.

# ಜಿಲ್ಲಾ ಉಪಾಧ್ಯಕ್ಷರಾಗಿ ಕುಂಟೋಜಿ ಆಯ್ಕೆ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ಗ್ಯಾರಂಟಿ ಯೋಜನೆಗಳಾದ ಶಕ್ತಿ, ಗೃಹಜ್ಯೋತಿ, ಅನ್ನಭಾಗ್ಯ, ಗೃಹಲಕ್ಷ್ಮಿ ಮತ್ತು ಯುವನಿಧಿಗಳ ಯೋಜನೆಗಳ ಲಾಭಗಳನ್ನು ಅರ್ಹ ಫಲಾನುಭವಿಗಳಿಗೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆಗಾಗಿ ಸಾಂಸ್ಥಿಕ ಕಾರ್ಯವಿಧಾನಗಳನ್ನು ಜಾರಿಗೆ ತರಲು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ರಚಿಸಿದ್ದು, ಪ್ರಾಧಿಕಾರದ ಜಿಲ್ಲಾ ಉಪಾಧ್ಯಕ್ಷರಾಗಿ ಸದ್ದಾಂ ಕುಂಟೋಜಿ ಅವರನ್ನು ಆಯ್ಕೆಮಾಡಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಡಾ.ಪ್ರಕಾಶ ಜೆ.ಸಿ ಆದೇಶಿಸಿದ್ದಾರೆ.

# ರೂ.17.76ಲಕ್ಷ ವೆಚ್ಚದ ಕಾಮಗಾರಿಗೆ ಭೂಮಿಪೂಜೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ಪುರಸಭೆ ವಾರ್ಡ ಸಂಖ್ಯೆ 5 ರಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ 2022–23 ನೇ ಸಾಲಿನ ಅಮೃತ ನಗರೋತ್ಥಾನ 4 ನೇ ಹಂತದ ಯೋಜನೆಯ ಅಡಿಯಲ್ಲಿ ಅಂದಾಜು ಮೊತ್ತ ರೂ.17.76 ಲಕ್ಷ ವೆಚ್ಚದಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿ ಭೂಮಿಪೂಜಾ ಸಮಾರಂಭ ಬುಧವಾರ ಜರುಗಿತು.

ಭೂಮಿ ಪೂಜೆ ನೆರವೇರಿಸಿದ ರಾಜ್ಯ ಸಹಕಾರಿ ಮಹಾ ಮಂಡಳದ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ ಮಾತನಾಡಿ, ಪಟ್ಟಣದ ಸಾರ್ವಜನಿಕರಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ರಸ್ತೆ, ಚರಂಡಿ ಸ್ವಚ್ಛತೆ, ವಿದ್ಯುತ್ ಸೇರಿದಂತೆ ಅನೇಕ ಮೂಲಭೂತ ಸೌಲಭ್ಯಗಳನ್ನು ಸಚಿವ ಶಿವಾನಂದ ಪಾಟೀಲ ಹಾಗೂ ಪುರಸಭೆ ಆಡಳಿತ ಮಂಡಳಿ ಸಮರ್ಪಕವಾಗಿ ನೀಡಲಾಗುತ್ತಿದೆ. ಬಸವೇಶ್ವರ ಜನ್ಮಸ್ಥಳ ಬಸವನಬಾಗೇವಾಡಿಗೆ ನಿತ್ಯವು ನಾನಾಕಡೆಗಳಿಂದ ಪ್ರವಾಸಿಗರು ಆಗಮಿಸುತ್ತಾರೆ. ಪಟ್ಟಣದ ಸಾರ್ವಜನಿಕರ ಪ್ರಮುಖ ರಸ್ತೆಯಾದ ಈ ರಸ್ತೆ ಬಹುದಿನಗಳಿಂದ ಹಾಳಾಗಿತ್ತು. ಈಗ ಈ ರಸ್ತೆ ಮತ್ತು ಅದರ ಪಕ್ಕದಲ್ಲಿ ಚರಂಡಿ ನಿರ್ಮಾಣ ಮಾಡುವದರಿಂದ ಬಸವಜನ್ಮ ಸ್ಮಾರಕ ವೀಕ್ಷಣೆಗೆ ಆಗಮಿಸುವ ಪ್ರವಾಸಿಗರಿಗೆ ಮತ್ತು ಪಟ್ಟಣದ ಸಾರ್ವಜನಿಕರಿಗೆ ಅನುಕೂಲವಾಗುತ್ತದೆ. ಗುತ್ತಿಗೆದಾರರು ಶೀಘ್ರವೇ ಕಾಮಗಾ-ರಿಯನ್ನು ನಿಗದಿತ ಕಾಲಾವಧಿಯಲ್ಲಿ ಪೂರ್ಣಗೊಳಿಸಿ ಜನರಿಗೆ,ಪ್ರವಾಸಿಗರಿಗೆ ಅನುಕೂಲ ಮಾಡಿಕೊಡಬೇಕೆಂದರು.

ಪುರಸಭೆ ವಾರ್ಡ ಸಂಖ್ಯೆ 5 ರ ಸದಸ್ಯ ಅಶೋಕ ಹಾರಿವಾಳ ಮಾತನಾಡಿ. ಪಟ್ಟಣದ ಅಗಸಿ ಒಳಗಡೆ ಇರುವ ಲಕ್ಷ್ಮೀನಾರಾಯಣ ದೇವಸ್ಥಾನದ ಬಲ-ಎಡ ಭಾಗದ ಎರಡು ರಸ್ತೆಗಳು ಪ್ರಮುಖವಾಗಿವೆ. ಈ ಹಿಂದೆ ಬಲ ಭಾಗದ ರಸ್ತೆಯನ್ನು ಈಗಾಗಲೇ ಸಿ.ಸಿ. ರಸ್ತೆ ಮಾಡಲಾಗಿದೆ. ಈಗ ಎಡ ಭಾಗದ ಈ ರಸ್ತೆಯ ಕಾಮಗಾರಿ ಮಾಡಲಾಗುವದು. ಈ ಕಾಮಗಾರಿಯು 5-6 ತಿಂಗಳಗಳ ಹಿಂದೆ ಪ್ರಾರಂಭವಾಗಬೇಕಾಗಿತ್ತು. ಕೆಲವು ತಾಂತ್ರಿಕ ತೊಂದರೆಯಿಂದ ಈ ಕಾಮಗಾರಿ ವಿಳಂಬವಾಗಿದೆ. ಆದಷ್ಟು ಬೇಗ ಗುತ್ತಿಗೆದಾರರು ಉತ್ತಮವಾದ ರಸ್ತೆ ಹಾಗೂ ಚರಂಡಿ ನಿರ್ಮಿಸುವ ಮೂಲಕ ಸಾರ್ವಜನಿಕರಿಗೆ ಅನುಕೂಲ ಮಾಡಿ ಕೊಡುತ್ತಾರೆ ಎಂದು ಹೇಳಿದರು.



ಈ ಸಂದರ್ಭದಲ್ಲಿ ಶಿವಾನಂದ ಈರಕಾರಮುತ್ಯಾ, ಪಂಚಾಕ್ಷರಿ ಕಾಳಹಸ್ತೇಶ್ವರಮಠ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾರಿವಾಳ, ಮುಖಂಡರಾದ ಬಸವರಾಜ ಗೊಳಸಂಗಿ, ಬಸವರಾಜ ಹಾರಿವಾಳ, ಸುರೇಶಗೌಡ ಪಾಟೀಲ, ಶೇಖರ ಗೊಳಸಂಗಿ, ಸುಭಾಸ ಚಿಕ್ಕೊಂಡ, ಶೇಖರಗೌಡ ಪಾಟೀಲ, ಸಂಕನಗೌಡ ಪಾಟೀಲ, ಬಸವರಾಜ ರಾಯಗೊಂಡ, ಸಂಗಮೇಶ ಓಲೇಕಾರ, ಕಲ್ಲು ಸೊನ್ನದ, ದಯಾನಂದ ಜಾಲಗೇರಿ, ಈರಣ್ಣ ವಂದಾಲ, ಎಂ.ಜಿ. ಆದಿಗೊಂಡ, ಮುದುಕಪ್ಪ ಬಸರಕೊಡ, ಸಂತೋಷ ಕೂಡಗಿ, ಜಗನ್ನಾಥ ಪತ್ತಾರ, ಬಸವರಾಜ ಬಿರಾದಾರ, ಗುತ್ತಿಗೆದಾರರಾದ ಕಲ್ಲನಗೌಡ ಬಿರಾದಾರ, ಶಾಂತು ರಾಠೋಡ, ಎಚ್. ಆರ್.ಬಾಗವಾನ, ಪುರಸಭೆ ಅಭಿಯಂತರ ಸಂತೋಷ ಗಿಡ್ಡಸನ್ನವರ ಇತರರು ಇದ್ದರು.

# ಅಂಗಾಂಗ ದಾನದ ಕುರಿತು ಜನಜಾಗೃತಿ ಅಗತ್ಯ

**ಉದಯರಶ್ಮಿ ದಿನಪತ್ರಿಕೆ**

ಮೂತ್ರಪಿಂಡ ಕಾಯಿಲೆ ಇತ್ತೀಚಿನ ದಿನಗಳಲ್ಲಿ ಹೆಚ್ಚು ಜನರಲ್ಲಿ ಕಾಣಿಸಿಕೊಳ್ಳುತ್ತಿದೆ. ಅದರಲ್ಲೂ ಭಾರತದಲ್ಲಿ ಮೂತ್ರಪಿಂಡ ವೈಫಲ್ಯದಿಂದ ಬಳಲುತ್ತಿರುವ ರೋಗಿಗಳಿಗೆ ಕಡಿಮೆ ವೆಚ್ಚದಲ್ಲಿ ಉತ್ತಮ ಗುಣಮಟ್ಟದ ಚಿಕಿತ್ಸೆಯುನ್ನು ಒದಗಿಸುವ ಸಂಶೋಧನೆಗಳು ನಡೆಯುತ್ತಿವೆ. ಮಧುಮೇಹ, ಅಧಿಕ ರಕ್ತದೊತ್ತಡ ಮತ್ತು ಜೀವನ ಶೈಲಿ ಸಂಬಂಧಿತ ಸಮಸ್ಯೆಗಳಿಂದ ಈ ಕಾಯಿಲೆ ಹೆಚ್ಚಾಗಲು ಪ್ರಮುಖ ಕಾರಣವಾಗಿದೆ. ದೀರ್ಘಕಾಲದ ಮೂತ್ರಪಿಂಡ ಕಾಯಿಲೆ (ಅಖಿಆ) ಸಾವಿನ ಪ್ರಮುಖ ಕಾರಣಗಳಲ್ಲಿ 8ನೇ ಸ್ಥಾನ ಪಡೆದಿದೆ.

ಭಾರತದಲ್ಲಿ ಪ್ರತಿವರ್ಷ ಮೂತ್ರಪಿಂಡ ಕಸಿ ಅಗತ್ಯವಿರುವ 2 ಲಕ್ಷ ಹೊಸ ರೋಗಿಗಳು ಪತ್ತೆಯಾಗುತ್ತಿದ್ದಾರೆ. ಆದರೆ 250 ಆಸ್ಪತ್ರೆಗಳಲ್ಲಿ ಕೇವಲ 7500 ರೋಗಿಗಳಿಗೆ ಮಾತ್ರ ಮೂತ್ರಪಿಂಡ ಕಸಿ ಸಾಧ್ಯವಾಗುತ್ತಿದೆ. ಅಗತ್ಯಕ್ಕಿಂತ ಕಡಿಮೆ ರೋಗಿಗಳಿಗೆ ಈ ಚಿಕಿತ್ಸೆ ಸಿಗುತ್ತಿರುವುದ-ರಿಂದ ಉಳಿದವರಿಗೆ ಮೂತ್ರಪಿಂಡ ಕಸಿ ಅಥವಾ ನಿಯಮಿತ ಡಯಾಲಿಸಿಸ್ ಸೌಲಭ್ಯವೂ ಸಿಗದ ಕಾರಣ ಈ ರೋಗಿಗಳಲ್ಲಿ ಹೆಚ್ಚಿನವರು 2-3 ವರ್ಷಗಳಲ್ಲಿ ರೋಗಕ್ಕೆ ತುತ್ತಾಗುತ್ತಾರೆ.

ಮೂತ್ರಪಿಂಡ ವೈಫಲ್ಯದಿಂದ ಬಳಲುತ್ತಿರುವ ರೋಗಿಗಳು ಗುಣಮಟ್ಟದ ಜೀವನ ಸಾಗಿಸಲು ಸಾಧ್ಯವಾಗದೇ ಹಲವಾರು ಸವಾಲುಗಳನ್ನು ಎದು-ರಿಸುತ್ತಾರೆ. ಇದು ರೋಗಿಗಳು



– ಡಾ. ಎಸ್. ಬಿ. ಪಾಟೀಲ
ಬಿ.ಎಲ್.ಡಿ.ಇ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ,
ಮೂತ್ರ ಶಾಸ್ತ್ರದ ವಿಭಾಗದ ಮುಖ್ಯಸ್ಥರು, ವಿಜಯಪುರ

ಮತ್ತು ಅವರ ಕುಟುಂಬದ ಮೇಲೆ ಸಾಮಾಜಿಕ, ಭಾವನಾತ್ಮಕ ಮತ್ತು ಆರ್ಥಿಕ ಪರಿಣಾಮವನ್ನು ಬೀರುತ್ತದೆ. ಮೂತ್ರಪಿಂಡದ ವೈಫಲ್ಯದ ರೋಗಿಗಳು ವಾರಕ್ಕೆ 2-3 ಬಾರಿ ಡಯಾಲಿಸಿಸ್ಗೆ ಒಳಗಾಗಬೇಕಾಗುತ್ತದೆ, ಕಟ್ಟುನಿಟ್ಟಾದ ಆಹಾರ ಪದ್ಧತಿ ಮತ್ತು ನಿಯಮಿತ ಔಷಧಿ ಪಡೆದುಕೊಂಡು ಜೀವನವನ್ನು ನಡೆಸಬೇಕು. ಡಯಾಲಿಸಿಸ್ ಅವಲಂಬನೆ ತಪ್ಪಿಸುವ ಮೂತ್ರಪಿಂಡ ಕಸಿ ಏಕೈಕ ಆಯ್ಕೆಯಾಗಿದೆ.

ಕಳೆದ ಮೂರು ದಶಕಗಳಲ್ಲಿ, ಅಖಿಆ ಚಿಕಿತ್ಸಾ ಪ್ರಯತ್ನಗಳು ಡಯಾಲಿಸಿಸ್ ಮತ್ತು ಮೂತ್ರಪಿಂಡ ಕಸಿ ಕೇಂದ್ರೀಕೃತವಾಗಿವೆ. ಅಲ್ಲದೇ, ಈ ರೋಗವನ್ನು ತಡೆಗಟ್ಟಲು ಮತ್ತು ಮಧುಮೇಹ, ಹೃದಯ ರಕ್ತನಾಳದ ಕಾಯಿಲೆ ಹಾಗೂ ಮೂತ್ರಪಿಂಡದ ವೈಫಲ್ಯದಿಂದ ಉಂಟಾಗುವ


**ಇಂದು (ಮಾ.14) ವಿಶ್ವ ಕಿಡ್ನಿ ದಿನ**

ತೊಂದರೆಗಳನ್ನು ತಗ್ಗಿಸಲು ಸೂಕ್ತವಾದ ಔಷಧೀಯ ಸೇವನೆಗೆ ಒತ್ತು ನೀಡುವುದು ಈಗಿನ ಅಗತ್ಯವಾಗಿದೆ.

ಹೊಸ ಚಿಕಿತ್ಸಾ ವಿಧಾನಗಳ



ಮೂಲಕ ಎಲ್ಲಾ ರೋಗಿಗಳಿಗೆ ವಿಶ್ವಾದ್ಯಂತ ಚಿಕಿತ್ಸೆ ನೀಡಲು ಸಾಧ್ಯವಿದೆಯಾದರೂ, ಈ ಕಾಯಿಲೆಗಳ ಬಗ್ಗೆ ಅರಿವಿನ ಕೊರತೆ, ದುಬಾರಿ ಎನಿಸುವ ಡಯಾಲಿಸಿಸ್ ವ್ಯವಸ್ಥೆ ಸೇರಿದಂತೆ ಕೆಲವು ಸಮಸ್ಯಗಳಿಂದಾಗಿ ಹೆಚ್ಚಿನ ರೋಗಿಗಳಿಗೆ ಸರಿಯಾದ ಚಿಕಿತ್ಸೆ ಸಿಗುತ್ತಿಲ್ಲ ಎಂಬುದು ತುಂಬಾ ವಿಷಾದನೀಯ. ಕೆಲವು ದೊಡ್ಡ ನಗರಗಳು ಮತ್ತು ಪಟ್ಟಣಗಳಲ್ಲಿ ಡಯಾಲಿಸಿಸ್ ವ್ಯವಸ್ಥೆ ಸುಲಭವಾಗಿ ಸಿಗುತ್ತದೆ. ಆದರೆ, ಗ್ರಾಮೀಣ ಭಾಗದಲ್ಲಿ ಅರಿವು ಮತ್ತು ಚಿಕಿತ್ಸೆ ಕೊರತೆ, ಮೂಢನಂಬಿಕೆಗಳು, ಕೈಗೆಟುಕದ ಚಿಕಿತ್ಸೆಯಿಂದಾಗಿ ರೋಗಿಗಳು ಸಂಕಷ್ಟ ಎದುರಿಸುತ್ತಿದ್ದಾರೆ.



ರೋಗಿಗಳಿಗೆ ನಿಯಮಿತ ತಪಾಸಣೆಗೆ ಸೌಲಭ್ಯ ಹೆಚ್ಚಿಸುವುದು, ಆರಂಭದಲ್ಲಿಯೇ ರೋಗ ಪತ್ತೆ, ಸರಿಯಾದ ಔಷಧಿಯ ಸಲಹೆ, ಜೀವನಶೈಲಿ ಸುಧಾರಣೆ, ಜೀವನದ ಹೊಸ ಭರವಸೆಯನ್ನು ಮೂಡಿಸುವ ಕಾರ್ಯತಂತ್ರದ ಅಗತ್ಯವಿದೆ. ಸರಕಾರದ ಆರೋಗ್ಯ ನೀತಿಗಳು, ಆರೋಗ್ಯ ಸೇವೆಗಳ ತಲುಪಿಸುವಿಕೆ, ಸಾರ್ವಜನಿಕ ಜಾಗೃತಿ ಕಾರ್ಯಕ್ರಮಗಳು, ಡಯಾಲಿಸಿಸ್ ಘಟಕಗಳ ಹೆಚ್ಚಳ ಮತ್ತು ಖಾಸಗಿ ವಲಯದ ಆಸ್ಪತ್ರೆಗಳು ಹಾಗೂ ಸ್ವಯಂ ಸೇವಾ ಸಂಘಟನೆಗಳ ಸಹಭಾಗಿತ್ವದ ಅಗತ್ಯವಿದೆ.

ಅಂಗಾಂಗ ದಾನದ ಕು-ರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು, ಕಿಡ್ನಿದಾನದ ಕುರಿತು ಪ್ರೋತ್ಸಾಹ ನೀಡುವುದು, ಅಂಗಾಂಗ ಕಸಿ ಚಿಕಿತ್ಸಾ ವೆಚ್ಚ ತಗ್ಗಿಸುವುದು, ನಾನಾ ಕಾರಣಗಳಿಂದ ಸಾವಿಗೀಡಾಗುವ ಮತ್ತು ಮೆದುಳು ನಿಷ್ಕ್ರೀಯಗೊಂಡ ವ್ಯಕ್ತಿಗಳ ಅಂಗಾಂಗ ದಾನದ ಕುರಿತು ಜನಜಾಗೃತಿ ಮೂಡಿಸುವುದು ಅಗತ್ಯವಾಗಿದೆ. ಪ್ರತಿ ವರ್ಷ ಸುಮಾರು 1 ರಿಂದ 1.50 ಲಕ್ಷ ಜನರು ರಸ್ತೆ ಅಪಘಾತಗಳಲ್ಲಿ ಸಾವಿಗೀಡಾಗುತ್ತಿದ್ದು, ಇಂಥ ವ್ಯಕ್ತಿಗಳಿಂದ ಪಡೆಯಬಹುದಾದ ಅಂಗಾಂಗಗಳ ಕು-ರಿತು ಅವರ ಸಂಬಂಧಿಗಳ ಮನವೊಲಿಸಿ ಅಂಗಾಂಗಳನ್ನು ಅಗತ್ಯವಿರುವ ರೋಗಿಗಳಿಗೆ ಕಸಿ ಮಾಡುವ ಮೂಲಕ ಮರುಜೀವ ನೀಡಬಹುದಾಗಿದೆ.

ಈ ಬಾರಿ ವಿಶ್ವ ಕಿಡ್ನಿ ದಿನದ -2024 ಘೋಷವಾಕ್ಯ "ಎಲ್ಲ-ರಿಗೂ ಕಿಡ್ನಿಯ ಆರೋಗ್ಯ: ಆರೈಕೆಗೆ ಸಮಾನವಾದ ಮತ್ತು ಚಿಕಿತ್ಸೆ ಒದಗಿಸುವುದು ಎಂಬುದಾಗಿದೆ". ಈ ನಿಟ್ಟಿನಲ್ಲಿ ಇದನ್ನು ನಮ್ಮ ಸಾಮಾಜಿ-ಕ ಜವಾಬ್ದಾರಿ ಎಂದು ಪರಿಗಣಿಸಿ ಶ್ರೀ ಬಿ. ಎಂ. ಪಾಟೀಲ ಡೀಮ್ಡ್ ವಿಶ್ವವಿದ್ಯಾಲಯದ ಕುಲಾಧಿಪತಿ ಮತ್ತು ಸಚಿವರಾದ ಎಂ. ಬಿ. ಪಾಟೀಲ, ಪ್ರಾಚಾರ್ಯ ಅರವಿಂದ ಪಾಟೀಲ ಮತ್ತು ಮೂತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಎಸ್. ಬಿ. ಪಾಟೀಲ ಅವರ ಮಾರ್ಗದರ್ಶನದಲ್ಲಿ ಮೂತ್ರಪಿಂಡ ರೋಗಿಗಳಿಗೆ ಅತ್ಯಾಧುನಿಕ ಚಿಕಿತ್ಸೆ ಮತ್ತು ಸೌಲಭ್ಯ ಒದಗಿಸಲು ಹಾಗೂ ಕಡಿಮೆ ದರದಲ್ಲಿ ಮೂತ್ರಪಿಂಡ ಕಸಿ ಚಿಕಿತ್ಸೆ ನೀಡಲು ಬದ್ಧವಾಗಿದೆ. ಈಗಾಗಲೇ ಈ ಆಸ್ಪತ್ರೆಯಲ್ಲಿ ಮೂತ್ರಪಿಂಡ ಕಸಿ ಯಶಸ್ವಿ ಶಸ್ತ್ರಚಿಕಿತ್ಸೆ ನಡೆಸಲಾಗಿದ್ದು, ಡಯಾಲಿಸಿಸ್ ಘಟಕಗಳನ್ನು ಹೆಚ್ಚಿಸುವ ಮೂಲಕ ವಿಜಯಪುರ ಮತ್ತು ಸುತ್ತಮುತ್ತಲಿನ ರೋಗಿಗಳಿಗೆ ಅನಕೂಲವಾಗಿದೆ. ಈ ವಿವಿ ಮೂತ್ರಪಿಂಡ ಕಸಿ ಚಿಕಿತ್ಸೆಗೆ ಅಗತ್ಯವಿರುವ ಎಲ್ಲ ಮೂಲಭೂತ ಸೌಲಭ್ಯಗಳನ್ನು ಹೊಂದಿದ್ದು, ಸರಕಾರಿ ಆರೋಗ್ಯ ವಿಮೆ ಯೋಜನೆಗಳಡಿ. (ಆಯುಷ್ಮಾನ್ ಭಾರತ್ ಮತ್ತು ಎ ಬಿ ಎ ಆರ್ ಕೆ) ಕಿಡ್ನಿ ಕಸಿ ಸೌಲಭ್ಯ ಲಭ್ಯವಿದೆ.

ಕಿಡ್ನಿ ಕಸಿ ಅಗತ್ಯವಿರುವ ರೋಗಿಗಳು Jeevasartakathe ವೆಬ್ಸೈಟ್ ಮೂಲಕ ಅಥವಾ ಆಸ್ಪತ್ರೆಗೆ ಬೇಟಿ ನೀಡುವ ಮೂಲಕ ಹೆಸರು ನೊಂದಾಯಿಸಬಹುದಾಗಿದೆ. ಈ ಮೂಲಕ ಕಿಡ್ನಿಗಳು ಲಭ್ಯವಿದ್ದಾಗ ಕಿಡ್ನಿ ಕಸಿ ಮಾಡಿಕೊಳ್ಳಬಹುದಾಗಿದೆ.

# ಮಾ.16ರಂದು ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಮತ್ತು ಕಾಮಿಡಿ ಕಿಲಾಡಿಗಳು ಮಹಾ ಆಡಿಷನ್

**ಉದಯರಶ್ಮಿ ನ್ಯೂಸ್**

ವಿಜಯಪುರ: ತನ್ನ ವಿಭಿನ್ನ ರಿಯಾಲಿಟಿ ಶೋಗಳ ಮೂಲಕ ಕರುನಾಡನ್ನು ರಂಜಿಸುತ್ತ ಬಂದಿರುವ ಜೀ ಕನ್ನಡ ವಾಹಿನಿಯು, ಈಗ ತನ್ನ ಹಿಟ್ ರಿಯಾಲಿಟಿ ಶೋಗಳಾದ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಮತ್ತು ಕಾಮಿಡಿ ಕಿಲಾಡಿಗಳನ್ನ ಮತ್ತೆ ತೆರೆಗೆ ತರಲು ತಯಾರಿ ನಡೆಸಿದೆ.

7 ಸೀಸನ್‌ಗಳನ್ನ ಯಶಸ್ವಿಯಾಗಿ ಪೂರೈಸಿರುವ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಈಗ ತನ್ನ 8 ನೇ ಆವೃತ್ತಿಯೊಂದಿಗೆ ಮತ್ತೆ ಕರುನಾಡನ್ನ ಕುಣಿಸಲು ತಯಾರಾಗಿದೆ. ಈಗಾಗಲೇ ಸಾಕಷ್ಟು ಯುವ ನೃತ್ಯ ನಿರ್ದೇಶಕರನ್ನ ಸ್ಯಾಂಡಲ್ ವುಡ್ಡಿಗೆ ನೀಡಿರುವ ಈ ರಿಯಾಲಿಟಿ ಶೋ ಮತ್ತಷ್ಟು ನೃತ್ಯ ನಿರ್ದೇಶಕರನ್ನ ಹುಟ್ಟು ಹಾಕುವ ಕೆಲಸವನ್ನ ಈ ಆವೃತ್ತಿಯಲ್ಲಿ ಮತ್ತೆ ಮಾಡಲಿದೆ.

ಇದರ ಜೊತೆಜೊತೆಗೆ ಸತತ 4 ಹಿಟ್ ಸೀಸನ್ನುಗಳನ್ನ ಕೊಟ್ಟಿರುವ ಕರುನಾಡಿನ ನೆಚ್ಚಿನ ರಿಯಾಲಿಟಿ ಶೋಗಳಲ್ಲಿ ಒಂದಾದ ಕಾಮಿಡಿ ಕಿಲಾಡಿಗಳು ಈಗಾಗಲೇ ಸಾಕಷ್ಟು ಕಾಮಿಡಿ ಕಲಾವಿದರನ್ನ ಕರುನಾಡಿಗೆ ನೀಡಿರುವುದು ಈಗ ಇತಿಹಾಸ. ವೇದಿಕೆಗಾಗಿ ಕಾಯುತ್ತಿರುವ ಅದೆಷ್ಟೋ ಹಾಸ್ಯ ನಟನಟಿಯರ ಕನಸನ್ನ ನನಸು ಮಾಡುತ್ತಿರುವ ಈ ರಿಯಾಲಿಟಿ ಶೋ ಈ ಬಾರಿ ಕಾಮಿಡಿ ಕಿಲಾಡಿಗಳು ಪ್ರೀಮಿಯರ್ ಲೀಗ್ ಎಂಬ ಹೊಸ ರೂಪದಲ್ಲಿ ಕರುನಾಡಿನ ಮುಂದೆ ಬರಲಿದೆ.

ಈ ಹಂತದಲ್ಲಿ ಇದಕ್ಕೆ ಪೂರ್ವಬಾವಿ ತಯಾರಿ ಎಂಬಂತೆ ಆಡಿಷನ್ ಪ್ರಕ್ರಿಯೆ ಕರುನಾಡಿನಾದ್ಯಂತ ಶುರುವಾಗಿದೆ.

ಇದೇ ಮಾರ್ಚ್ 16 ರಂದು ಶನಿವಾರ ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ರವರೆಗೆ ಪ್ರಗತಿ ಕಿರಿಯ ಮತ್ತು




ಹಿರಿಯ ಪ್ರಾಥಮಿಕ ಶಾಲೆ, ಆರ್.ಟಿ.ಓ ಕಛೇರಿ ಹಿಂಭಾಗ, ರಾಜಾಜಿನಗರ,

ವಿಜಯಪುರ, ಇಲ್ಲಿ ಆಡಿಷನ್ ನಡೆಯಲಿದೆ.

ಆಡಿಷನಲ್ಲಿ ಭಾಗವಹಿಸಲು ಇಚ್ಛಿಸುವವರು ಅಡ್ರಸ್ ಪ್ರೂಫ್ ಜೆರಾಕ್ಸ್ ಜೊತೆ ಎರಡು ಪಾಸ್ ಪೋರ್ಟ್ ಸೈಜ್ ಪೋಟೊದೊಂದಿಗೆ ಆಡಿಷನ್ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದ್ದು, ಜೀ ಕನ್ನಡ ವಾಹಿನಿಯು ಈ ಆಡಿಷನ್ಗೆ ಯಾವುದೇ ಶುಲ್ಕ ವಿಧಿಸಿರುವುದಿಲ್ಲವೆಂದು ಸ್ಪಷ್ಟ ಪಡಿಸಿದೆ. ಹಾಗೂ ವಾಹಿನಿಯ ಹೆಸರಲ್ಲಿ ಹಣ ಕೇಳುವವರ ವಿರುದ್ಧ ಶಿಸ್ತು ಕ್ರಮ ಜರುಗಿಸುವುದಾಗಿ ತಿಳಿಸಿದೆ.

# ಮಾ.14-15 ರಂದು ವಿದ್ಯುತ್ ವ್ಯತ್ಯಯ

**ಉದಯರಶ್ಮಿ ನ್ಯೂಸ್**

ವಿಜಯಪುರ: ಇಂಡಿ ವಿಭಾಗದ ತಡವಲಗಾ 33/11 ಕೆವ್ಹಿ ವಿದ್ಯುತ್ ವಿತರಣಾ ಉಪ ಕೇಂದ್ರದಲ್ಲಿ ತುರ್ತು ಕಾಮಗಾರಿ ಕೈಗೊಂಡಿರುವುದ-ರಿಂದ ಸದರಿ 33/11 ಕೆವ್ಹಿ ಮೇಲೆ ಸರಬರಾಜಾಗುವ ಎಲ್ಲ 11ಕೆವ್ಹಿ ಮಾರ್ಗಗಳಿಗೆ ಮಾ.14 ಹಾಗೂ 15 ರಂದು ಮತ್ತು ಇಂಡಿ ವಿಭಾಗದ ತಾಂಬಾ 33/11 ಕೆವ್ಹಿ ಮಾರ್ಗಗಳಿಗೆ ಮಾ.14 ರಂದು ಅನಿಯಮಿತ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕೆಂದು ಇಂಡಿ ಹೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರ ಎಸ್.ಎ.ಬಿರಾದಾರ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.



# ಡಾ.ಅಂಬೇಡ್ಕರ ಪುತ್ತಳಿ ಸ್ಥಾಪಿಸಲು ಆಗ್ರಹ

**ಉದಯರಶ್ಮಿ ನ್ಯೂಸ್**



ವಿಜಯಪುರ: ನಗರದ ಮಹಾನಗರ ಪಾಲಿಕೆ ಆವರಣದ ಒಳಾಂಗಣದಲ್ಲಿ ಡಾ. ಬಿ. ಆರ್ ಅಂಬೇಡ್ಕರ ಅವರ ಪುತ್ತಳಿ (ಮೂರ್ತಿ ) ನಿರ್ಮಿಸಲು ಒತ್ತಾಯಿಸಿ ಬೀಮ ಸರಕಾರ ಸಂಘಟನಾ ಸಮಿತಿ ಇವರ ವತಿಯಿಂದ ಆಯುಕ್ತರಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಭೀಮ ಸರಕಾರ ಸಂಸ್ಥಾಪಕರು ಮತ್ತು ಜಿಲ್ಲಾಧ್ಯಕ್ಷ ಪರಶುರಾಮ ಚಲವಾದಿ ಮಾತನಾಡಿ, ಮಹಾ ನಾಯಕ ಸಂವಿಧಾನ ಶಿಲ್ಪಿ ಡಾ. ಬಿ. ಆರ್ ಅಂಬೇಡ್ಕರ ರವರು ನಮ್ಮ ದೇಶಕ್ಕೆ ಶ್ರೇಷ್ಠವಾದ ಸಂವಿಧಾನವನ್ನು ಕೊಟ್ಟಂತವರು. ಮತ್ತು ಎಲ್ಲ ಬಡವರು, ದೀನ ದುರ್ಬಲರ, ಎಲ್ಲ ಜನಾಂಗದವರ ಅಭಿವೃದ್ಧಿಗಾಗಿ ಶ್ರಮಿಸಿದ ಮಹಾನಾಯಕ. ಇವರ ಪುತ್ಥಳಿಯನ್ನು ಮಹಾನಗರ ಪಾಲಿಕೆಯ ಒಳಾಂಗಣದಲ್ಲಿ ಸ್ಥಾಪನೆ ಮಾಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಹುಲ ಮಾನಕರ, ಉದಯಕುಮಾರ್ ಆಕಾಶ, ಇಸ್ಮಾಯಿಲ್ ಬೀಳಗಿ, ರಾಜು ಬುರ್ಲಿ, ಲಕ್ಷ್ಮಣ ಬ್ಯಾಲ್ಯಾಳ, ರಫೀಕ್ ಚಟ್ಟರ್ಕಿ, ಮತ್ತಿತರರು ಉಪಸ್ಥಿತರಿದ್ದರು.

# ಶಾಸಕ ಯತ್ನಾಳರಿಂದ ರೂ.8 ಕೋಟಿ ಕಾಮಗಾರಿಗೆ ಭೂಮಿಪೂಜೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ವಿವಿಧೆಡೆ ಅಭಿವೃದ್ಧಿ ಕಾಮಗಾರಿಗಳಿಗೆ ನಗರ ಶಾಸಕರಾದ ಬಸನಗೌಡ ರಾ.ಪಾಟೀಲ ಯತ್ನಾಳ ಅವರು ಭೂಮಿಪೂಜೆ ನೆರವೇರಿಸಿದರು.

ಮಹಾನಗರ ಪಾಲಿಕೆ ವಾರ್ಡ ನಂ.22 ರಲ್ಲಿ ಬರುವ ಜಿಲ್ಲಾ ಪಂಚಾಯಿತಿ ಮುಖ್ಯ ದ್ವಾರದಿಂದ ಡಿ.ದೇವರಾಜು ಅರಸು ಭವನ ವರೆಗೆ ರೂ.4.90 ಕೋಟಿ ಅನುದಾನದಲ್ಲಿ ಸಿಸಿ ರಸ್ತೆ ನಿರ್ಮಾಣ ಹಾಗೂ ಸ್ಟ್ರೀಟ್ ಲೈಟ್ ಅಳವಡಿಕೆ ಕಾಮಗಾರಿಗೆ ಗಾಂಧಿ ಭವನದ ಎದುರು ಭೂಮಿಪೂಜೆ ನೆರವೇರಿಸಿದರು.



ನಂತರ ಕನಕದಾಸ ಬಡಾವಣೆಯ ಡಿ.ದೇವರಾಜ ಅರಸ ಭವನದಿಂದ ಬಿ.ಎಸ್.ಎನ್.ಎಲ್ ಕ್ವಾಟರ್ಸ ವರೆಗೆ ರೂ.3.10 ಕೋಟಿ ಅನುದಾನದಲ್ಲಿ ಸಿಸಿ ರಸ್ತೆ ಹಾಗೂ ಡಾಂಬರ ರಸ್ತೆ ಸುಧಾರಣೆ ಕಾಮಗಾರಿಗೆ ಕನಕದಾಸ ಬಡಾವಣೆಯ ಬಸ್ ಸ್ಟಾಪ್ ಬಳಿ ಭೂಮಿಪೂಜೆ ನೆರವೇರಿಸಿದರು.


ಭೂಮಿಪೂಜೆ ಬಳಿಕ ಸಾರ್ವಜನಿಕ–ರಿಂದ ಅಹವಾಲು ಸ್ವೀಕರಿಸಿದರು.

ಇದೇ ವೇಳೆ ಸ್ಥಳೀಯ ನಿವಾಸಿಗಳು ಶಾಸಕರಿಗೆ ಆತ್ಮೀಯವಾಗಿ ಸನ್ಮಾನಿಸಿದರು.

ಮಹಾನಗರ ಪಾಲಿಕೆ ಸದಸ್ಯರಾದ ಪ್ರೇಮಾನಂದ ಬಿರಾದಾರ, ಮುಖಂಡರಾದ ಪಾಂಡು ಸಾಹುಕಾರ ದೊಡಮನಿ, ಶಂಕರ ಹೂಗಾರ, ಚಂದ್ರು ಚೌದರಿ, ಶರಣು ಕಾಖಂಡಕಿ, ರಾಜು ಬಿರಾದಾರ ಸೇರಿದಂತೆ ಮುಖಂಡರು, ಸ್ಥಳೀಯ ನಿವಾಸಿಗಳು ಹಾಗೂ ಅಧಿಕಾ–ರಿಗಳು ಇದ್ದರು.

# ಸಂಸದ ಹೆಗಡೆ ಬಂಧನಕ್ಕೆ ಎನ್‌ಎಸ್‌ಯುಐ ಆಗ್ರಹ

**ಉದಯರಶ್ಮಿ ನ್ಯೂಸ್**




ಸಿಂದಗಿ: ಸಂವಿಧಾನವನ್ನೇ ತಿದ್ದುಪಡಿ ಮಾಡುತ್ತೇವೆ ಎಂದು ಹೇಳಿಕೆ ನೀಡಿರುವ ಉತ್ತರ ಕನ್ನಡ ಜಿಲ್ಲೆಯ ಸಂಸದ ಅನಂತ್ ಕುಮಾರ್ ಹೆಗಡೆ ಅವರ ನಡೆಯನ್ನು ನಮ್ಮ ಶಾಖೆಯು ಖಂಡಿಸುತ್ತದೆ ಎನ್–ಎಸ್‌ಯುಐ ಘಟಕದ ತಾಲೂಕಾಧ್ಯಕ್ಷ ಷಹಜಹಾನ ಗೋಲಗೇರಿ ಹೇಳಿದರು.

ಪಟ್ಟಣದ ಅಂಬೇಡ್ಕರ್ ವೃತ್ತದ ಎದುರು ಭಾರತ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟ ಸಿಂದಗಿ ತಾಲೂಕು ಶಾಖೆಯ ವತಿಯಿಂದ ಹಮ್ಮಿಕೊಂಡ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಸಂವಿಧಾನ ವಿರೋಧಿ ಹೇಳಿಕೆ ನೀಡಿರುವ ಸಂಸದ ಅನಂತಕುಮಾರ ಹೆಗಡೆ ಅವರನ್ನು ಈ ಕೂಡಲೇ ಅಮಾನತ್ತು ಮಾಡಬೇಕು. ದೇಶದ ಪವಿತ್ರ ಗ್ರಂಥ ಎಂದು ನಂಬಿರುವ ಭಾರತದ ಸಂವಿಧಾನದ ಬಗ್ಗೆ ಬಹಳ ಹಗುರವಾಗಿ ಮಾತನಾಡಿ ಸಮಾಜದಲ್ಲಿ ಶಾಂತಿಯನ್ನು ಕದಡಿಸುವ ಜೊತೆಗೆ ವಿಷಬೀಜ ಬಿತ್ತುವ ಕಲಸವನ್ನು ಮಾಡುತ್ತಿರುವ ಉತ್ತರ ಕನ್ನಡ ಜಿಲ್ಲೆ ಸಂಸದ ಅನಂತಕುಮಾರ ಹೆಗಡೆ ಅವರನ್ನು ಈ ಕೂಡಲೇ ಬಂಧಿಸಿ ಕಾನೂನು ರೀತಿಯಲ್ಲಿ ಕ್ರಮವಹಿಸಬೇಕು ಎಂದು ತಾಲೂಕು ದಂಡಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು

ಈ ವೇಳೆ ಉಪಾಧ್ಯಕ್ಷ ಸಿದ್ದು ಚಾವರ್, ಪ್ರಧಾನ ಕಾರ್ಯದರ್ಶಿ ಹುಸೇನ್ ಆಳಂದ್, ಸಂಗಮೇಶ್ ಮನಗೂಳಿ, ರವಿ ಬಂಡಗಾರ, ಸಿದ್ದು ಬೊಮ್ಮನಜೋಗಿ, ಬಂದೇನವಾಜ್, ಸುನೀಲ ಸೇರಿದಂತೆ ಹಲವು ಕಾರ್ಯಕರ್ತರು ಇದ್ದರು.

# ವಿದ್ಯಾರ್ಥಿಗಳಿಗೆ ಕನ್ನಡ ಕಡ್ಡಾಯವಾಗಲಿ :ವಾಲಿಕಾರ

**ಉದಯರಶ್ಮಿ ನ್ಯೂಸ್**

ವಿಜಯಪುರ: ಪ್ರಾಥಮಿಕ ಹಾಗು ಪ್ರೌಢ ಹಂತದ ವಿದ್ಯಾರ್ಥಿಗಳಿಗೆ ಕನ್ನಡ ಕಡ್ಡಾಯಗೊಳಿಸಬೇಕು. ನಾಡಿನ ಎಲ್ಲ ವಿದ್ಯಾರ್ಥಿಗಳು ಕನ್ನಡ ಓದುವ, ಬರೆಯುವ ಹಾಗು ಮಾತನಾಡುವ ಸಾಮರ್ಥ್ಯವನ್ನು ಶಿಕ್ಷಕರು ಹಾಗು ಪಾಲಕರು ಬೆಳಸಬೇಕೆಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ ಅಭಿಪ್ರಾಯ ವ್ಯಕ್ತಪಡಿಸಿದರು.

ಮುದ್ದೇಬಿಹಾಳ ತಾಲೂಕಿನ ತಾರನಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಲ್ಲ ವಿದ್ಯಾರ್ಥಿಗಳಿಗೆ ಸಾಹಿತ್ಯಕ್ಕೆ ಸಂಬಂಧಿಸಿದ ಪುಸ್ತಕಗಳನ್ನು ವಿತರಿಸಿ ಮಾತನಾಡಿದ ಹಾಸಿಂಪೀರ ವಾಲಿಕಾರ, ವಿದ್ಯಾರ್ಥಿಗಳು ಸಮಯ ವ್ಯರ್ಥಮಾಡದೆ ಅಭ್ಯಾಸದಲ್ಲಿ ನಿರತರಾಗಬೇಕು.ಮತ್ತು ಪಾಲಕರು ಕುಟುಂಬದಲ್ಲಿ ಕಲಿಕಾ ವಾತಾವರಣ ನಿರ್ಮಾಣಮಾಡಬೇಕು. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ತರಗತಿಗೆ ಅನುಗುಣವಾಗಿ ಸ್ಪರ್ಧಾತ್ಮಕ ಮನೋಭಾವ ಬೆಳಸಿಕೊಳ್ಳಬೇಕು ಎಂದರು.

ತಾರನಾಳ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಬಸವರಾಜ ಬಿರಾದಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ಶಾಲೆಯ ಗುರುಮಾತೆ ಸುಮಲತಾ ಗಡಿಯಪ್ಪನವರು ಮೈಸೂರಿನ ದಸರಾ ಕವಿಗೋಷ್ಠಿಯಲ್ಲಿ ಭಾಗವಹಿಸಿದ ಪ್ರಯುಕ್ತ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇಲ್ಲಿಯವರೆಗೆ ಬಂದು ಗೌರವಿಸಿದ್ದು ಶ್ಲಾಘನೀಯ ಎಂದರು.




ಗೌರವ ಸನ್ಮಾನ ಸ್ವೀಕರಿಸಿದ ಸುಮಲತಾ ಗಡಿಯಪ್ಪನವರ ಮಾತನಾಡಿ, ಜಿಲ್ಲಾ ಕಸಾಪ ಅನೇಕ ಪ್ರತಿಭಾವಂತರಿಗೆ ವೇದಿಕೆ ಕಲ್ಪಿಸುವ ಮೂಲಕ ಸ್ಪೂರ್ತಿ ನೀಡುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ನಡೆದ ಕವಿಗೋಷ್ಠಿಯಲ್ಲಿ ಸೌಮ್ಯ ಚಿಂಚೊಳ್ಳಿ, ಸೃಷ್ಟಿ ತಾರನಾಳ, ರಸೂಲಸಾಬ ಡವಳಗಿ, ರಿಯಾನಾ ದೊಡ್ಡಮನಿ, ಸಾಗರ ಚಲವಾದಿ, ತೇಜಶ್ವಿನಿ ಚಿಂಚೊಳ್ಳಿ ಸಾಕ್ಷಿ ಚಲುವಾದಿ ಕವನ ವಾಚಿಸಿದರು.

ಮುಖ್ಯ ಅತಿಥಿಗಳಾಗಿ ಅಗಸಬಾಳ ಶಾಲೆ ಮುಖ್ಯ ಅಧ್ಯಾಪಕ ಶ್ರೀಶೈಲ ಸಜ್ಜನ. ಹಳ್ಳೂರ ಶಾಲೆ ಮುಖ್ಯ ಅಧ್ಯಾಪಕ ಶಿವಪುತ್ರಪ್ಪ ಸಜ್ಜನ ವೇದಿಕೆಯ ಮೇಲಿದ್ದರು.

ಶಿಕ್ಷಕರರಾದ ದುಂಡಪ್ಪಗೌಡ ಬಿರಾದಾರ ಪ್ರಾಸ್ತಾವಿಕ ಮಾತನಾಡಿದರು. ಲಾಲಸಾಬ ನದಾಫ ನಿರೂಪಿಸಿದರು. ವಿಶ್ವನಾಥ ಕುಲಕರ್ಣಿ ವಂದಿಸಿದರು.

# ಕಟ್ಟಕಡೆಯ ವ್ಯಕ್ತಿಗೂ ಗ್ಯಾರಂಟಿ ಯೋಜನೆ: ಸಚಿವ ಶಿವಾನಂದ

**ಉದಯರಶ್ಮಿ ನ್ಯೂಸ್**



ನಿಡಗುಂದಿ: ಸರ್ಕಾರದ ಪಂಚ ಯೋಜನೆಗಳಾದ ಅನ್ನಭಾಗ್ಯ, ನಾರಿಶಕ್ತಿ, ಗೃಹಜ್ಯೋತಿ, ಗೃಹಲಕ್ಷ್ಮೀ, ಯುವನಿಧಿ ಯೋಜನೆಗಳು ಜನರ ಮನೆಬಾಗಿಲಿಗೆ ತಲುಪಿಸುವಲ್ಲಿ ಜಿಲ್ಲಾ ಮಟ್ಟ ಹಾಗೂ ತಾಲೂಕು ಮಟ್ಟದಲ್ಲಿ ಸಮಿತಿಯನ್ನು ರಚಿಸಲಾಗಿದೆ. ಪಂಚ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಅಧಿಕಾ–ರಿಗಳು ಮನೆ ಬಾಗಿಲಿಗೆ ಬರುತ್ತಾರೆ. ಸರ್ಕಾರದ ಯೋಜನೆಗಳಿಂದ ಯಾರೂ ವಂಚಿತರಾಗಬಾರದು. ಇದನ್ನು ಕಟ್ಟ ಕಡೆಯ ವ್ಯಕ್ತಿಗೂ ತಲುಪಿಸುವ ಗುರಿ ಸರ್ಕಾರಕ್ಕೆ ಇದೆ ಎಂದು ಬಸವನ ಬಾಗೇವಾಡಿ ಮತಕ್ಷೇತ್ರದ ಶಾಸಕರು ಹಾಗೂ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಹೇಳಿದರು.

ಬುಧವಾರ ನಿಡಗುಂದಿ ಗ್ರಾಮೀಣ ವಿದ್ಯಾವರ್ಧಕ ಸಂಘದ ಪ್ರೌಢಶಾಲೆಯ ಆವರಣದಲ್ಲಿ ನಡೆದ ಬಸವನ ಬಾಗೇವಾಡಿ, ಕೊಲ್ಹಾರ, ನಿಡಗುಂದಿ, ತಾಲೂಕುಗಳ ವ್ಯಾಪ್ತಿಯ ಬಸವನ ಬಾಗೇವಾಡಿ ವಿಧಾನಸಭಾ ಮತಕ್ಷೇತ್ರದ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿ ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅನ್ನಭಾಗ್ಯ ಯೋಜನೆಯಡಿ 5 ಕೆಜಿ ಅಕ್ಕಿ ವಿತರಿಸಲಾಗುತ್ತಿದೆ. ಹಾಗೂ ಉಳಿದ ಅಕ್ಕಿಯ ಮೊತ್ತ 175 ರೂಪಾಯಿಗಳನ್ನು ಡಿಬಿಟಿ ಮೂಲಕ ಫಲಾನುಭವಿಯ ಖಾತೆಗೆ ಹಾಕಲಾಗುತ್ತಿದೆ. ಶಾಲಾ ಮಕ್ಕಳಿಗೆ ವಾರಕ್ಕೆ 5 ದಿವಸ ಹಾಲು ನೀಡಲಾಗುತ್ತಿದೆ. ಮಕ್ಕಳಿಗೆ ಶೂ ಭಾಗ್ಯ, ಕೃಷಿಭಾಗ್ಯ, ಶಾದಿಬಾಗ್ಯ, ಮನಸ್ವಿನಿ, ಯಶಶ್ವಿನಿ ಯೋಜನೆಗಳು ಜಾರಿಗೆ ಮಾಡಲಾಗಿದೆ.

ನಾರಿ ಶಕ್ತಿ ಯೋಜನೆಯಿಂದ ಮಹಿಳೆಯರು ರಾಜ್ಯದ ತುಂಬೆಲ್ಲಾ ಸಂಚಾರ ಮಾಡುತ್ತಿದ್ದಾರೆ. ಅವರು ದೇವಸ್ಥಾನ, ಪ್ರವಾಸಿ ಸ್ಥಳಗಳಿಗೆ ಭೇಟಿ ನೀಡುತ್ತಿರುವುದರಿಂದ ಸರಕಾರಕ್ಕೆ ಆದಾಯ ಬರುತ್ತಿದೆ. ಬಡ ಮನೆಯ ಮಕ್ಕಳು ವಿದ್ಯಾರ್ಥಿಗಳಿಗೆ ಶಿಕ್ಷಣ ಹಾಗು ಅಭ್ಯಾಸ ಮಾಡಲು ಗೃಹಜ್ಯೋತಿ ಯೋಜನೆ ಸಹಕಾರಿಯಾಗಿದೆ. ಗೃಹಲಕ್ಷ್ಮೀ ಯೋಜನೆಯಿಂದ ಹೆಣ್ಣು ಮಕ್ಕಳು ಸ್ವಾಲಂಬಿಯಿಂದ ಬದುಕು ನಡೆಸುತ್ತಿದ್ದಾರೆ. ಯುವನಿಧಿಯಿಂದ ಉದ್ಯೋಗ ಅರಸುತ್ತಿರುವ ಯುವಕ ಯುವತಿಯರಿಗೆ ಸಹಾಯ ಆಗುತ್ತದೆ ಎಂದು ಹೇಳಿದರು.

ಬಸವನ ಬಾಗೇವಾಡಿ ಕ್ಷೇತ್ರದಲ್ಲಿ 80 ಸಾವಿರ ಕುಟುಂಬಗಳಿಗೆ ಈ ಯೋಜನೆಗಳ ಲಾಭ ಸಿಗುತ್ತಿದ್ದು, ನೂರಕ್ಕೆ ನೂರರಷ್ಟು ಈ ಯೋಜನೆಗಳು ಜನರಿಗೆ ತಲುಪಿಸುವಲ್ಲಿ ಅಧಿಕಾರಿಗಳು ಕಾರ್ಯೋನ್ಮುಖರಾಗಬೇಕು ಎಂದರು.

ಬಸವಣ್ಣ ಅವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಸರಕಾರ ಘೋಷಣೆ ಮಾಡಿದೆ. ಅದರಂತೆ ಶರಣರ ಆಶಯದಂತೆ ಆಡಳಿತ ನಡೆಸುತ್ತಿದೆ. ಆಲಮಟ್ಟಿಯಲ್ಲಿ ಮೀನುಗಾರಿಕೆ ಸಂಶೋಧನ ಕೇಂದ್ರ ಸ್ಥಾಪಿಸಲು ಬಜೆಟ್ ನಲ್ಲಿ ಒಪ್ಪಿಗೆ ನೀಡಿದೆ. ಇದು ಸ್ಥಳಿಯವಾಗಿ ಉದ್ಯೋಗ ಸೃಷ್ಟಿಗೆ ಸಹಕಾರಿಯಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಜಿಲ್ಲಾಧಿಕಾರಿ ಟಿ.ಭೂಬಾಲನ್‌ಮಾತನಾದರು.

ಸಮಾವೇಶದಲ್ಲಿ ಉಚಿತ ಆರೋಗ್ಯ ಶಿಬಿರ ಹಾಗೂ ಸ್ಥಳದಲ್ಲಿಯೇ ಗ್ಯಾರಂಟಿ ಯೋಜನೆಗಳ ನೋಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ವಿವಿಧ ಫಲಾನುಭವಿಗಳಿಗೆ ವಿವಿಧ ಯೋಜನೆಗಳ ಆದೇಶ ಪ್ರತಿಯನ್ನು ನೀಡಲಾಯಿತು. ಪೌರ ಕಾರ್ಮಿಕರಿಗೆ ಸನ್ಮಾನ ಮಾಡಲಾಯಿತು.

ವೇದಿಕೆ ಮೇಲೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ್ ಸೋನಾವಣೆ, ಜಿಲ್ಲಾ ಪಂಚಾಯತ್ ಸಿಇಓ ರಿಶಿ ಆನಂದ, ಮಾಜಿ ಶಾಸಕರಾದ ರಾಜು ಆಲಗೂರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದಿ ಇಲಾಖೆಯ ಉಪನಿರ್ದೇಶಕ ಕೆ.ಕೆ.ಚವ್ಹಾಣ, ಉಪ ವಿಭಾಗಾಧಿಕಾರಿ ಶ್ವೇತಾ ಬಿಡಿಕರ್ , ಹೆಸ್ಕಾಂ ಅಧಿಕ್ಷಕ ಸಿದ್ದಪ್ಪ ಉಪಸ್ಥಿತ–ರಿದ್ದರು. ಮಹೇಶ ಗಾಳಪ್ಪಗೋಳ ನಿರೂಪಿಸಿದರು.

# ರೈತಸಂಘಕ್ಕೆ ಕಾರ್ಯಾಲಯ ಒದಗಿಸಲು ಆಗ್ರಹ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಕೋರವಾರ ಗ್ರಾಮದ ರೈತಸಂಘ ಹಾಗೂ ಹಸಿರುಸೇನೆ ಘಟಕಕ್ಕೆ ಕಾರ್ಯಾಲಯ ಒದಗಿಸುವಂತೆ ಆಗ್ರಹಿಸಿ ಪದಾಧಿಕಾರಿಗಳು ಪಿಡಿಓ ಕೆ.ಎಸ್.ಕಡಕಭಾವಿ ಅವರಿಗೆ ಮನವಿ ಸಲ್ಲಿಸಿದರು.

ತಾಲ್ಲೂಕಿನ ಕೋರವಾರ ಗ್ರಾಮದ ಪಂಚಾಯಿತಿ ಆವರಣಕ್ಕೆ ಬುಧವಾರ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆಯ ಪದಾಧಿಕಾರಿಗಳು ತೆರಳಿ ಕಚೇರಿ ಒದಗಿಸಲು ಆಗ್ರಹಿಸಿದರು.



ಈ ಸಂದರ್ಭದಲ್ಲಿ ಅಧ್ಯಕ್ಷ ಐ.ಎಸ್.ಕುಳೇಕುಮಟಗಿ ಮಾತನಾಡಿ, ಗ್ರಾಮದ ರೈತಸಂಘದ ಘಟಕ ಸುಮಾರು 1500 ರಿಂದ 2000ವರೆಗೆ ಸದಸ್ಯರನ್ನು ಹೊಂದಿದೆ. ಆದರೆ ಈ ಎಲ್ಲ ಸದಸ್ಯರು ಹಾಗೂ ಪದಾಧಿಕಾರಿಗಳ ಸಭೆ ನಡೆಸಲು ಸ್ಥಳಾವಕಾಶ ಇಲ್ಲದಂತಾಗಿದೆ.

ರೈತರು ಹತ್ತು ಹಲವು ಸಮಸ್ಯೆಗಳನ್ನು ಎದು–ರಿಸುತ್ತಿದ್ದು, ಈ ಸಮಸ್ಯೆಗಳಿಗೆ ಪರಿಹಾರವಾಗಿ ಗ್ರಾಮ ಘಟಕದಲ್ಲಿ ಆಗಾಗ್ಗೆ ಸಭೆ ಕೈಗೊಳ್ಳುವುದು ಅನಿವಾರ್ಯವಾಗಿದೆ. ಆದ್ದರಿಂದ ತಾವು ಸರ್ಕಾರದ ಮೂಲಕ ರೈತ ಸಮುದಾಯದ ಸಭೆಗಳಿಗಾಗಿ ವ್ಯವಸ್ಥಿತ ಕಟ್ಟಡವನ್ನು ಒದಗಿಸಿಕೊಡಬೇಕು. ಇಲ್ಲವೆ ರೈತಸಂಪರ್ಕ ಕೇಂದ್ರದಲ್ಲಿ ಸಭೆ ಜರುಗಿಸಲು ಅನುಕೂಲ ಮಾಡಕೊಡಬೇಕೆಂದು ಆಗ್ರಹಿಸಿದರು.

ಗೌರವಾಧ್ಯಕ್ಷ ಶಿವಾನಂದಯ್ಯ ಹಿರೇಮಠ(ವರ್ಕಾನಳ್ಳಿ), ಸಂಘಟನಾ ಕಾರ್ಯದರ್ಶಿ ಸುಭಾಸ ಸಜ್ಜನ, ಯುವ ಘಟಕದ ಅಧ್ಯಕ್ಷ ಸಂಗಮೇಶ ಹುಣಸಗಿ, ಗ್ರಾಮ ಘಟಕದ ಅಧ್ಯಕ್ಷ ಮಲ್ಲಪ್ಪ ಸುಂಬಡ, ನಾನಾಗೌಡ ಬೊರಾವತ್, ಚಿದಾನಂದ ಮೋಪಗಾರ, ಶಾಂತಗೌಡ ಸಿದರಡ್ಡಿ, ತುಳಜಾರಾಮ ಜಾಧವ, ಗುರಪ್ಪ ಹಂಗರಗಿ ಸೇರಿದಂತೆ ಇತರರು ಇದ್ದರು.

# ಅಮ್ಮನ ಕೈತುತ್ತು


## ಭಾವರಶ್ಮಿ



– ಅನಸೂಯಾ ಕಾರಂತ್


("ನಮ್ಮ ಕಥಾ ಅರಮನೆ" ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**



ಅಮ್ಮನ ಕೈ ತುತ್ತು ಎನ್ನುವ ವಿಷಯವೇ ಮನಸ್ಸಿಗೆ ಒಂದು ರೀತಿಯ ಆಪ್ತತೆಯ ಭಾವನೆ,ಮಮತೆಯ ಸ್ಪರ್ಶ ನೀಡುವಂತಹ ಸಂಗತಿ. ನಾವೆಲ್ಲಾ ಅಮ್ಮನ ಕೈ ತುತ್ತಿನ ಸವಿ ಉಂಡವರೇ. "ಉಪ್ಪಿಗಿಂತ ರುಚಿಯಿಲ್ಲ ತಾಯಿಗಿಂತ ಬಂಧುವಿಲ್ಲ","ತಾಯಿಯ ಋಣವನ್ನು ತೀರಿಸಲು ಸಾಧ್ಯವಿಲ್ಲ"– ಎನ್ನುವ ಗಾದೆಯ ಮಾತುಗಳಿವೆ. ಈ ಮಾತುಗಳಿಂದ ಮನುಷ್ಯನ ಜೀವನದಲ್ಲಿ ತಾಯಿಯ ಪಾತ್ರ ಎಷ್ಟೊಂದು ಮಹತ್ವದ್ದು ಎಂದು ತಿಳಿಯಬಹುದು.

ಪ್ರತಿಯೊಬ್ಬ ತಾಯಿಯೂ ಅವಳ ಮಕ್ಕಳು ಚಿಕ್ಕವರಿದ್ದಾಗ ಅವರವರೇ ತಮ್ಮ ಕೈಯಿಂದ ಊಟ ಮಾಡುವ ತನಕ ಅತ್ಯಂತ ಪ್ರೀತಿಯಿಂದ, ಕಾಳಜಿಯಿಂದ ತಮ್ಮ ಕೈಯಾರೇ ತುತ್ತು ನೀಡುತ್ತಾರೆ. ಅಮ್ಮನ ಕೈ ತುತ್ತು ತಾಯಿ ಮಕ್ಕಳ ನಡುವಿನ ಪ್ರೀತಿಯನ್ನು ಬಾಂಧವ್ಯವನ್ನು ಬೆಸೆಯುವ ಕೊಂಡಿ. ಮಕ್ಕಳು ಹೊಟ್ಟೆ ತುಂಬಾ ತಿಂದರೆ ತಾಯಿಗೆ ಸಮಾಧಾನ ಮತ್ತು ಮನದಲ್ಲಿ ಸಾರ್ಥಕತೆಯ ಭಾವ ಮೂಡುವುದು. ಮಕ್ಕಳು ಬೆಳೆದು ದೊಡ್ಡವರಾದ ಮೇಲೂ ಬಾಯಿಗೆ ತುತ್ತು ನೀಡುವ ತಾಯಂದಿರನ್ನೂ ನಾನು ನೋಡಿದ್ದೇನೆ.



ಹಿಂದಿನ ಕಾಲದಲ್ಲಿ ಕೂಡು ಕುಟುಂಬವಿದ್ದ ಕಾಲದಲ್ಲಿ ತಾಯಂದಿರು ಮನೆಯ ಮಕ್ಕಳನ್ನೆಲ್ಲಾ ಸಾಲಾಗಿ ಕುಳ್ಳಿರಿಸಿ ಕೈ ತುತ್ತು ಹಾಕುತ್ತಿದ್ದರು. ಎಲ್ಲರೂ ಒಟ್ಟಿಗೆ ಕೂತು ನಗು ನಗುತ್ತಾ ಊಟ ಮಾಡುವುದೇ ಒಂದು ಸಂಭ್ರಮದ ವಿಷಯವಾಗಿತ್ತು. ಇದರಿಂದ ಕೂಡಿ ಬಾಳುವ ಹಂಚಿ ತಿನ್ನುವ ಪಾಠವನ್ನು ಮಕ್ಕಳು ಮನೆಯಲ್ಲೇ ಕಲಿಯುತ್ತಿದ್ದರು.

ನನ್ನಮ್ಮನಿಗೆ ನಾವು ನಾಲ್ಕು ಜನ ಮಕ್ಕಳು. ನನ್ನ ಅಮ್ಮ ಎರಡು ವರ್ಷದ ಮಗುವಿದ್ದಾಗ ಅವಳ ಅಮ್ಮ ಅಂದರೆ ನನ್ನಜ್ಜಿ ತೀರಿಕೊಂಡಿದ್ದರು. ನನ್ನ ಅಜ್ಜನೇ ನನ್ನಮ್ಮನನ್ನು ಸಾಕಿ ಬೆಳೆಸಿದ್ದು. ತಾಯಿಯ ಪ್ರೀತಿಯನ್ನೇ ಕಾಣದ ನನ್ನಮ್ಮ ತನ್ನ ಮಕ್ಕಳು ತಾಯಿಯ ಪ್ರೀತಿಯಿಂದ ವಂಚಿತರಾಗಬಾರದೆಂದು ತನ್ನೆಲ್ಲಾ ಮಮತೆ ವಾತ್ಸಲ್ಯವನ್ನು ಧಾರೆ ಎರೆದು ನಮ್ಮನ್ನು ಬೆಳೆಸಿದ್ದಳು. ಎಲ್ಲಾ ತಾಯಂದಿರೂ ತಮ್ಮ ಮಕ್ಕಳನ್ನು ಪ್ರೀತಿಯಿಂದ ಬೆಳೆಸುತ್ತಾರಾದರೂ ನನ್ನಮ್ಮನಿಗೆ ತನ್ನ ಮಕ್ಕಳ ಮೇಲಿನ ಪ್ರೀತಿ ಇತರರಿಗಿಂತ ತುಸು ಜಾಸ್ತಿ ಎಂದು ನನಗನಿಸುತಿತ್ತು.

ನಮ್ಮ ಕಡೆ ಕೈ ತುತ್ತು ನೀಡುವ ಕ್ರಮವಿಲ್ಲ. ನಮ್ಮ ಮನೆಯಲ್ಲಿ ಸಮಾರಂಭ ನಡೆದಾಗ ನೆಂಟರಿಷ್ಟರ ಮಕ್ಕಳು ಸೇರಿದಾಗ ಒಂದೆರಡು ಬಾರಿ ಅಮ್ಮ ಮಕ್ಕಳಿಗೆಲ್ಲಾ ಕೈ ತುತ್ತು ಹಾಕಿದ್ದಳು. ಅದೊಂದು ಹೊಸ ಅನುಭವವಾದ್ದರಿಂದ ನಾವೆಲ್ಲಾ ಖುಷಿಯಿಂದ ಮಾಮೂಲಿಗಿಂತ ನಾಲ್ಕು ತುತ್ತು ಜಾಸ್ತಿಯೇ ತಿನ್ನುತ್ತಿದ್ದೆವು. ನನಗೆ ಮದುವೆಯಾಗಿ ಮಕ್ಕಳಾದ ಮೇಲೆ ಒಮ್ಮೆ ನನಗೆ ವಿಪರೀತ ಜ್ವರ ಬಂದು ಊಟ ಮಾಡದೆ ಮಲಗಿದ್ದಾಗ ನನ್ನ ಸೋದರಮಾವನ ಹೆಂಡತಿ ನನ್ನತ್ತೆ ನನ್ನನ್ನು ನೋಡಲು ಬಂದಿದ್ದರು. ನಾನು ಊಟ ಮಾಡದೆ ಮಲಗಿದ್ದು ತಿಳಿದು ನನ್ನನ್ನು ಎಬ್ಬಿಸಿ ಒತ್ತಾಯ ಮಾಡಿ ಬಾಯಿಗೆ ತುತ್ತು ನೀಡಿ ಊಟ ಮಾಡಿಸಿದ್ದರು. ಈಗಲೂ ಆ ಘಟನೆ ನೆನಪಾದರೆ ನನ್ನ ಮೇಲಿನ ಅವರ ಪ್ರೀತಿ,ಕಾಳಜಿಯನ್ನು ನೆನೆದು ನನ್ನ ಮನಸ್ಸು ಆರ್ದ್ರವಾಗಿ, ಕಣ್ಣಂಚು ತೇವವಾಗುತ್ತದೆ. ನನ್ನ ಮಕ್ಕಳು ಚಿಕ್ಕವರಿದ್ದಾಗ ದಿನಕ್ಕೊಂದು ಹೊಸ ಕಥೆ ಹೇಳಿದರೆ ಮಾತ್ರ ತುತ್ತು ಗಂಟಲೊಳಗೆ ಇಳಿಯುತ್ತಿತ್ತು. ಹೊಸ ಕಥೆಯೆಲ್ಲಾ ಮುಗಿದಿದ್ದರೆ ನಾನೇ ಕಥೆ ಕಟ್ಟಿ ಹೇಳಿ ಊಟ ಮಾಡಿಸುತ್ತಿದ್ದೆ.

ಇಂದಿನ ಈ ಆದ–ುನಿಕ ಯುಗದಲ್ಲಿ ಉದ್ಯೋಗಸ್ಥ ತಾಯಂದಿರಿಗೆ ತಮ್ಮ ಮಕ್ಕಳಿಗೆ ಊಟ ಮಾಡಿಸಲು ಸಮಯವಾಗಲೀ ವ್ಯವಧಾನವಾಗಲೀ ಇಲ್ಲವೆಂದೇ ಹೇಳಬಹುದು.ಕೆಲವರು ಮಕ್ಕಳನ್ನು ನೋಡಿಕೊಳ್ಳಲು ಕೆಲಸದಾಕೆಯನ್ನು ನೇಮಿಸಿಕೊಳ್ಳುತ್ತಾರೆ. ಕೆಲಸದಾಕೆ ಎಂದಿಗೂ ಅಮ್ಮನಾಗಲಾರಳು. ಇಂದಿನ ಮಕ್ಕಳು ಅಮ್ಮನ ಕೈ ತುತ್ತಿನ ರುಚಿಯಿಂದ ವಂಚಿತರಾಗುತ್ತಿದ್ದಾರೇನೋ ಎನಿಸುತ್ತಿದೆ. "ಮುತ್ತು ಕೊಡುವವಳು ಬಂದಾಗ ತುತ್ತು ಕೊಟ್ಟವಳನ್ನು ಮರೆಯಬೇಡ" ಎನ್ನುವ ಮಾತೊಂದಿದೆ. ಮದುವೆಯಾಗಿ ಹೆಂಡತಿ ಬಂದ ಮೇಲೆ ತಾಯಿಯನ್ನು ಕಡೆಗಣಿಸಬಾರದು ಎಂಬುದೇ ಈ ಮಾತಿನ ತಾತ್ಪರ್ಯ.

ತುತ್ತು ನೀಡಿದ ತಾಯಿಯು ವೃದ್ಧಾಪ್ಯದಲ್ಲಿ ಅನಾರೋಗ್ಯದಿಂದ ಹಾಸಿಗೆ ಹಿಡಿದಾಗ ಅವರ ಮಕ್ಕಳು ತಮ್ಮ ಕೈಯಾರೇ ಊಟ ಮಾಡಿಸಿದ ನಿದರ್ಶನಗಳೂ ಇವೆ.

ತುತ್ತು ತಿನ್ನಿಸಿದ ನನ್ನ ಮಕ್ಕಳೆಲ್ಲಾ ಈಗ ಬೆಳೆದು ದೊಡ್ಡವರಾಗಿದ್ದಾರೆ. ತುತ್ತು ನೀಡಿದ ನನ್ನಮ್ಮ ನಮ್ಮನ್ನಗಲಿದ್ದಾಳೆ. ಆದರೆ ಮಕ್ಕಳಿಗೆ ತುತ್ತು ನೀಡಿದ ಖುಷಿ,ಅಮ್ಮನ ವಾತ್ಸಲ್ಯದ ಸವಿನೆನಪುಗಳನ್ನು ಆಗಾಗ ಮೆಲುಕು ಹಾಕಿ ಖುಷಿಪಡುತ್ತೇನೆ..

## ಕಾವ್ಯರಶ್ಮಿ

– ಗೀತಾ ವಸಂತ ಜೋಶಿ

("ನಮ್ಮ ಕಥಾ ಅರಮನೆ" ಬರಹಗಾರರು)



### ದೇವ ಹೆಣೆದ ಜಾಲ

**ಉದಯರಶ್ಮಿ ದಿನಪತ್ರಿಕೆ**



ಕೊಟ್ಟಿಹನು ದೇವನು ಪ್ರತಿ ಜೀವಿಗಳಿಗೆ ಬುದ್ದಿಯನು
ಇಟ್ಟಿಹನು ಎಲ್ಲರೋಳು ನಾನಾವಿಧದ ವಿದ್ಯೆಯನು ॥
ಜೇಡ ಬಲೆಯನು ಹೆಣೆಯುವ ರೀತಿ ವಿಸ್ಮಯ
ಎಡಬಿಡದೆ ಬಿದ್ದರು ಲೆಕ್ಕಿಸದೆ ಮತ್ತೇ ತನ್ಮಯ ॥
ದಾರ ಸೂಜಿಯಿಂದ ಮಾಡಿರುವ ತೆರದಂತೆ
ದೂರದ ಹುಳುಗಳು ಒಳ ಬಂದು ಬೀಳುವಂತೆ ॥
ಪುಟ್ಟ ಜೇಡ ರಚಿಸುವ ಚಕ್ರವ್ಯೂಹ ಚಾಣಾಕ್ಷನವನು
ದಟ್ಟವಾದ ಬಲೆಯೊಳಗೆ ಬಂಧಿಸುವವ ಬೇಟೆಯನು ॥
ಜೇಡನ ಬಲೆಯಂತೆ ಮೋಹದ ಬಲೆಯು ಸಂಸಾರ
ನಡ,ನಡುವೆ ನಗಿಸುತ ಅಳಿಸುತ ಇರುವ ಸೂತ್ರಧಾರ ॥
ಮುಳುಗಿಸಿ ಜೀವಿಯನು ಮಾಯೆಯೊಳಗೆ ಬಂಧಿಸಿದ
ಮುಳುಗಲು ಬೀಡದೆ,ನೆನೆ ನನ್ನ ಕಾಯುವೆನು ಎಂದ ॥
ನಾನಾಡಿಸುವ ನಾಟಕಕೆ ನಾನೆ ಕಾರಣನೆಂದ ರಾಮ
ನೀನಾಡಲು ಹೊರಟರೆ ಹುಟ್ಟಡಗಿಸುವೆ ಎಂದ ರಘುರಾಮ ॥

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR